ಸಂಪುಟ : ೨ ಸಂಚಿಕೆ ೮೨ ಪುಟ : 4 ಬೆಲೆ: ೩.೦೦ ಗುರುವಾರ ಮೇ ೨ 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 89 Pages : 4 Price : 3.00 Thursday May 9 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದಂತೆ ಲೋಕಸಭೆ ಚುನಾವಣೆ–2024ರ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಮತ್ತು ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತಿಯನ್ನು ಮೇ 10ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಪೂಜೆ ಮತ್ತು ಪುಷ್ಪಾರ್ಚನೆ ಮೂಲಕ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶ ಪರೀಕ್ಷೆ ದಿನಾಂಕ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024–25ನೇ ಸಾಲಿಗೆ 6ನೇ ತರಗತಿ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷಾ ದಿನಾಂಕವನ್ನು ಮೇ 19ರವರೆಗೆ ಮುಂದೂಡಲಾಗಿದೆ. ಪರೀಕ್ಷಾ ಪ್ರವೇಶ ಪತ್ರಗಳನ್ನು ಮೇ 13ರಿಂದ ಈ ಕೆಳಕಂಡ ತಾಲೂಕಾ ಮಾಹಿತಿ ಕೇಂದ್ರಗಳಿಂದ ಪಡೆಯಬಹುದಾಗಿದೆ. ತಾ.ಪಂ ಆವರಣ ಮುಂಡರಗಿ–08371–262911, ಮೌಲಾನಾ ಆಝಾದ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ–08372–297494, ತಾ.ಪಂ ಆವರಣ ರೋಣ–08381–267258, ತಹಸೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ–08377–245411, ತಾ.ಪಂ ಹತ್ತಿರ ಶಿರಹಟ್ಟಿ–08487–242810. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಶ್ರೀ ಸಿದ್ಧಾರೂಢರ ಮಹಾರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮಾಡಳ್ಳಿ ಗ್ರಾಮದದಲ್ಲಿ ಶ್ರೀ ಸಿದ್ಧಾರೂಡ ಜಾತ್ರಾಮಹೋತ್ಸವದ ಅಂಗವಾಗಿ ಬುಧವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಶ್ರೀ ಸಿದ್ಧಾರೂಢರ ಮಹಾರಥೋತ್ಸವ ಜರುಗಿತು.

ಗ್ರಾಮದಲ್ಲಿ ಬೆಳಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ತೊಟ್ಟು ತಂಡೋಪತಂಡವಾಗಿ ಶ್ರೀಮಠಕ್ಕೆ ಆಗಮಿಸಿದರು. ರಥಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನಿರಿಸಿ ಶ್ರದ್ಧಾ–ಭಕ್ತಿಯಿಂದ ಪೂಜೆ ಸಲ್ಲಿಸಿ ಕೃತಾರ್ಥರಾದರು. ಸಂಜೆ ಅಣ್ಣಿಗೇರಿಯ ದಾಸೋಹಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಮತ್ತು ವರವಿ ಮೌನೇಶ್ವರದ ಮಠದ ಶ್ರೀ ವಿರುಪಾಕ್ಷೇಶ್ವರ ಸ್ವಾಮಿಗಳು ಸಾನ್ನಿಧ್ಯದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ರಥೋತ್ಸವ ನೆರವೇರಿತು. ಸೇರಿದ್ದ ಅಪಾರ ಭಕ್ತ ಸಮೂಹ ಭಕ್ತಿ–ಭಾವಗಳಿಂದ ಉತ್ತತ್ತಿ, ಹಣ್ಣುಗಳನ್ನು ತೇರಿಗೆ ಎಸೆದು ಜಯಘೋಷ ಮೊಳಗಿಸಿದರು. ಗುರುವಾರ ಕಡುಬಿನ ಕಾಳಗ ಹಾಗೂ ಕೌದಿ ಪಡೆಯೊಂದಿಗೆ ಜಾತ್ರಾಮಹೋತ್ಸವ ಮಂಗಲಗೊಳ್ಳುವದು.

### ದೇವಗಿರಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಭದ್ರವಾದ ಅಭ್ಯರ್ಥಿಗಳ ಭವಿಷ್ಯ

# ಮತಯಂತ್ರಗಳ ಸ್ಟ್ರಾಂಗ್ ರೂಮ್‌ಗೆ ಬಿಗಿಭದ್ರತೆ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಜಿಲ್ಲೆಯಲ್ಲಿ ಶಾಂತಿಯುತ ಮತದಾನವಾಗಿದ್ದು, 18ನೇ ಲೋಕಸಭೆಯ ಸಾರ್ವತ್ರಿಕ ಚುನಾವಣೆಯ ಹಾವೇರಿ ಕ್ಷೇತ್ರದಲ್ಲಿ ಶೇ.77.60ರಷ್ಟು ಮತದಾನವಾಗಿದೆ. ಮತ ಎಣಿಕೆ ಕೇಂದ್ರವಾದ ದೇವಗಿರಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳ ಇವಿಎಂಗಳನ್ನು ಪೊಲೀಸ್ ಹಾಗೂ ಕೇಂದ್ರ ಸಶಸ್ತ್ರ ಮೀಸಲು ಪಡೆಯ ಬಿಗಿಭದ್ರತೆಯಲ್ಲಿ ಇರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

ದೇವಗಿರಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಂಟು ವಿಧಾನಸಭಾ ಕ್ಷೇತ್ರಗಳ ಇವಿಎಂಗಳನ್ನು ಪ್ರತ್ಯೇಕ ಕೊಠಡಿಯಲ್ಲಿ ದಾಸ್ತಾನು ಮಾಡಲಾಗಿದೆ. ಕೊಠಡಿ ಸುತ್ತಲೂ ಸೂಕ್ತ ಬಂದೋಬಸ್ತ್ ಮಾಡಲಾಗಿದೆ. ಪ್ರತಿ ಕೊಠಡಿಗೂ ಸಿಸಿ ಕ್ಯಾಮರಾ ಅಳವಡಿಸಲಾಗಿದೆ. ಹೊರ ಭಾಗದಲ್ಲೂ ಸಿಸಿ ಕ್ಯಾಮರಾಗಳನ್ನು ಅಳವಡಿಸಿ, ದಿನ 24 ತಾಸು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಉಸ್ತುವಾರಿಗೆ ನೇಮಕ ಮಾಡಲಾಗಿದೆ ಹಾಗೂ ಕೇಂದ್ರ ಶಸ್ತ್ರಪಡೆ ಹಾಗೂ ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕೇಂದ್ರ ಚುನಾವಣಾ ಆಯೋಗದಿಂದ ಜಿಲ್ಲೆಗೆ ನಿಯೋಜನೆಗೊಂಡ ಸಾಮಾನ್ಯ ವೀಕ್ಷಕರಾದ ಐಎಎಸ್ ಅಧಿಕಾರಿ ತಿತರ್‌ಮರೆ ಅವರ ಸಮ್ಮುಖದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ



ರಘುನಂದನ್ ಮೂರ್ತಿ ವಿವಿಧ ರಾಜಕೀಯ ಪಕ್ಷಗಳ ಅಧಿಕೃತ ಏಜೆಂಟರುಗಳ ಸಮ್ಮುಖದಲ್ಲಿ ಸ್ಟ್ರಾಂಗ್‌ರೂಂ ಒಳಗೆ ಹಾಗೂ ಹೊರಗಿನ ಭದ್ರತಾ ಕ್ರಮ, ಪ್ರತಿ ಮತಯಂತ್ರಗಳ ವೀಕ್ಷಣೆ ನಡೆಸಿ ಭದ್ರತಾ ಕೊಠಡಿಗೆ ಸೀಲ್‌ಗಳನ್ನು ಮಾಡಿ, ಭದ್ರಪಡಿಸಲಾಯಿತು.

ಸ್ಟ್ರಾಂಗ್ ರೂಂಗಳ ಭದ್ರತೆಗೆ ಬಿಗಿ ಪೊಲೀಸ್ ಪಹರೆ ಹಾಕಲಾಗಿದ್ದು, ಮತಯಂತ್ರಗಳ ಭದ್ರತೆಗೆ ಸಿಸಿ ಕ್ಯಾಮರಾಗಳ ಜೊತೆಗೆ ಪೊಲೀಸರ ಹದ್ದಿನ ಕಣ್ಣು ಇರಿಸಲಾಗಿದೆ. ಓರ್ವ ಡಿಎಸ್‌ಪಿ, ಇಬ್ಬರು ಸಿಪಿಐ, ಆರು ಜನ ಪಿಎಸ್‌ಐ, ಎಂಟು ಜನ ಎಎಸ್‌ಐ, ಹೆಡ್ ಕಾನಸ್ಟೇಬಲ್ ಹಾಗೂ 36 ಪಿಸಿ ಸಿಬ್ಬಂದಿಗಳು, ಎರಡು ಜಿಲ್ಲಾ ಶಸ್ತ್ರ ಮೀಸಲು ಪಡೆ, ಒಂದು ಕೆಎಸ್‌ಆರ್‌ಪಿ ತುಕಡಿ ನಿಯೋಜಿಸಲಾಗಿದೆ.

ಸ್ಟ್ರಾಂಗ್ ರೂಂಗಳ ಭದ್ರತಾ ಪ್ರಕ್ರಿಯೆಯಲ್ಲಿ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ



> ಪ್ರತೀ ಕೊಠಡಿಗೆ ಸಿಸಿ ಕ್ಯಾಮರಾ ಅಳವಡಿಕೆ, ಅಗ್ನಿನಿರೋಧಕ, ಜಲನಿರೋಧಕ, ಬೆಳಕಿನ ಕಿರಣಗಳು ಕೊಠಡಿಯೊಳಗೆ ನುಸುಳದಂತೆ ಎಲ್ಲ ಕಿಟಕಿ–ಬಾಗಿಲುಗಳನ್ನು ಭದ್ರಪಡಿಸಿ ಸುರಕ್ಷತಾ ಕ್ರಮಗಳನ್ನು ಪಕ್ಷದ ಏಜೆಂಟರ ಸಮ್ಮುಖದಲ್ಲಿ ಖಚಿತಪಡಿಸಲಾಗಿದೆ. ಸ್ಟ್ರಾಂಗ್ ರೂಂಗಳ ಉಸ್ತುವಾರಿಗಾಗಿ ಮೇ 7ರಿಂದ ಜೂನ್ 4ರವರೆಗೆ ಮೂರು ಪಾಳಿಯಲ್ಲಿ ಕಾರ್ಯನಿರ್ವಹಿಸಲು 6 ಜನ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಬಿ.ಎಸ್. ನೇಮನಗೌಡ, ಗದಗ ಜಿ.ಪಂ ಸಿಇಓ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಪೂಜಾರ ವೀರಮಲ್ಲಪ್ಪ, 8 ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ತಹಸೀಲ್ದಾರರು, ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

### ಫಲ ನೀಡಿದ ಸ್ವೀಪ್ ಚಟುವಟಿಕೆ । ಮತದಾರರಲ್ಲಿ ಹೆಚ್ಚಿದ ಮತದಾನದ ಜಾಗೃತಿ

# ಮತದಾನದಲ್ಲಿ ದಾಖಲೆಯ ಶೇ. 14.37 ಏರಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ರೋಣ, ಶಿರಹಟ್ಟಿ ಮತ್ತು ಗದಗ, ಬಾಗಲಕೋಟ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ನರಗುಂದ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿ ಚುನಾವಣೆಗೂ ಮತದಾನ ಪ್ರಮಾಣ ಏರಿಕೆಯಾಗುತ್ತಿರುವುದು ಕಂಡುಬಂದಿದೆ.

ಮೇ 7ರಂದು ರಾಜ್ಯದಲ್ಲಿ ನಡೆದ 2ನೇ ಹಂತದ ಲೋಕಸಭಾ ಚುನಾವಣೆಗೆ ಗದಗ ಜಿಲ್ಲೆಯಲ್ಲಿ ಶೇ. 73.66ರಷ್ಟು ಮತದಾನ ದಾಖಲಾಗಿದ್ದು, ಹಿಂದಿನ ಚುನಾವಣೆಗೆ ಹೋಲಿಕೆ ಮಾಡಿದಲ್ಲಿ ಈ ಬಾರಿಯ ಮತದಾನ ದಾಖಲೆಯಾಗಿದೆ.

2009ರಲ್ಲಿ ಕ್ಷೇತ್ರ ಪುನರ್ ವಿಂಗಡಣೆ ನಂತರ ಗದಗ ಜಿಲ್ಲೆಯ ಮೂರು ವಿಧಾನಸಭಾ ಕ್ಷೇತ್ರಗಳು ಹಾವೇರಿ ಮತ್ತು ನರಗುಂದ ವಿಧಾನಸಭಾ ಕ್ಷೇತ್ರ ಬಾಗಲಕೋಟ ಲೋಕಸಭೆ ವ್ಯಾಪ್ತಿಗೆ ಒಳಪಟ್ಟಿತು. ಅಂದಿನಿಂದಲೂ ಶೇಕಡಾವಾರು ಪ್ರಮಾಣವನ್ನು ಗಣನೆಗೆ ತೆಗೆದುಕೊಂಡರೆ, ಮತದಾರರು ಜಾಗೃತರಾಗುತ್ತಿರುವುದು ಸ್ಪಷ್ಟವಾಗುತ್ತಿದೆ.

2009ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಸರಾಸರಿ



ಮತದಾನ ಪ್ರಮಾಣ ಶೇ. 59.29ರಷ್ಟಿತ್ತು. ಸದ್ಯ 2024ರ ಮೇ 7ರಂದು ನಡೆದ ಮತದಾನದಲ್ಲಿ ಶೇ. 73.66ರಷ್ಟು ಮತದಾನವಾಗಿ, ಶೇ. 14.37ರಷ್ಟು ಮತದಾನ ಪ್ರಮಾಣ ಏರಿಕೆಯಾಗಿದೆ.

ಸ್ವೀಪ್ ಸಮಿತಿಯ ಮತದಾನ ಜಾಗೃತಿ ಕಾರ್ಯಕ್ರಮದ ಪರಿಣಾಮವಾಗಿ, ಜನರೂ ಎಚ್ಚೆತ್ತುಕೊಂಡಿದ್ದು, ಯುವಕರು ಮತದಾನ ಮಾಡಲು ಮುಂದೆ ಬರುತ್ತಿದ್ದಾರೆ. ಶತಾಯುಷಿಗಳು,

> **ಫಲಪ್ರದವಾದ ಸ್ವೀಪ್ ಚಟುವಟಿಕೆ**
>
> ಈ ಬಾರಿ ಲೋಕಸಭಾ ಚುನಾವಣೆ ರಾಜ್ಯದಲ್ಲಿ ಎರಡು ಹಂತದಲ್ಲಿ ನಡೆದಿದ್ದರಿಂದ ಮತದಾನ ಜಾಗೃತಿಗಾಗಿ ಸ್ವೀಪ್ ಸಮಿತಿ ಹೆಚ್ಚು ಹೆಚ್ಚು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಮಯಾವಕಾಶ ಒದಗಿತ್ತು. ಜನರನ್ನು ಜಾಗೃತಗೊಳಿಸಲು ನಾನಾ ರೀತಿಯ ಚಟುವಟಿಕೆಗಳ ಮೂಲಕ ಜನರಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು. ನಮ್ಮ ಪ್ರಯತ್ನಗಳು ಫಲ ನೀಡಿರುವುದು ಖುಷಿ ಮೂಡಿಸಿದೆ.
>
> **– ಭರತ್ ಎಸ್.**
>
> ಸ್ವೀಪ್ ಸಮಿತಿ ಅಧ್ಯಕ್ಷರು, ಜಿ.ಪಂ ಸಿಇಓ.

ವಿದೇಶಗಳಲ್ಲಿರುವವರೂ ತಮ್ಮ ಊರಿಗೆ ಬಂದು ಮತ ಚಲಾಯಿಸುತ್ತಿದ್ದು, ಇತರರಿಗೂ ಪ್ರೇರಣೆಯಾಗುತ್ತಿದ್ದಾರೆ. ಭವಿಷ್ಯದ ದಿನಗಳಲ್ಲಿ ಮತದಾನ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಭರವಸೆ ಮೂಡಿಸಿದೆ ಎನ್ನುತ್ತಾರೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ.

## ಕೋವಿಡ್ ಲಸಿಕೆ ಹಿಂಪಡೆಯುವುದಾಗಿ ಘೋಷಿಸಿದ ಅಸ್ಟ್ರಾಜೆನೆಕಾ



■ವಿಜಯಸಾಕ್ಷಿ ಸುದ್ದಿ, ಪುಣೆ

ಜಾಗತಿಕವಾಗಿ ತನ್ನ ಕೋವಿಡ್–19 ಲಸಿಕೆಯನ್ನು ಹಿಂಪಡೆಯಲು ನಿರ್ಧರಿಸಿರುವುದಾಗಿ 'ಕೋವಿಶೀಲ್ಡ್' ಲಸಿಕೆ ತಯಾರಕ ಕಂಪನಿ ಅಸ್ಟ್ರಾಜೆನೆಕಾ ಹೇಳಿದೆ.

ಕೋವಿಶೀಲ್ಡ್ ಲಸಿಕೆ ಅಪರೂಪದ ಅಡ್ಡಪರಿಣಾಮಗಳನ್ನು ಉಂಟು ಮಾಡಬಹುದು ಎಂದು ಅಸ್ಟ್ರಾಜೆನೆಕಾ ಒಪ್ಪಿಕೊಂಡ ಬೆನ್ನಲ್ಲೇ ಲಸಿಕೆ ಹಿಂಪಡೆಯಲು ಮುಂದಾಗಿರುವುದು ಅನುಮಾನಕ್ಕೆ ಕಾರಣವಾಗಿದೆ. ಆದರೆ, ಕಂಪನಿ ಬೇಡಿಕೆ ಕುಸಿತದ ಸಬೂಬು ಹೇಳಿದೆ.

ಬ್ರಿಟಿಷ್–ಸ್ವೀಡಿಷ್ ಬಹುರಾಷ್ಟ್ರೀಯ ಔಷಧೀಯ ಕಂಪನಿಯಾದ ಅಸ್ಟ್ರಾಜೆನೆಕಾ ಮತ್ತು ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯ ಜೊತೆಗೂಡಿ ಅಭಿವೃದ್ಧಿಪಡಿಸಿದ ಕೋವಿಶೀಲ್ಡ್ ಲಸಿಕೆಯನ್ನು ಭಾರತದಲ್ಲಿ ಪುಣೆಯ ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ವಿತರಣೆ ಮಾಡಿತ್ತು.

ಕೋವಿಡ್–19 ಲಸಿಕೆಗೆ ಜಾಗತಿಕವಾಗಿ ಬೇಡಿಕೆ ಕುಸಿದಿದೆ. ಅಲ್ಲದೆ, ಕೋವಿಡ್‌ನ ಹೊಸ ರೂಪಾಂತರಗಳಿಗೆ ಹೊಸ ರೀತಿಯ ಲಸಿಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ. ಈ ಕಾರಣಗಳಿಕೆ ಲಸಿಕೆ ಹಿಂತೆಗೆದುಕೊಳ್ಳಲು ನಿರ್ಧರಿಸಿದ್ದೇವೆ ಎಂದು ಅಸ್ಟ್ರಾಜೆನೆಕಾ ತಿಳಿಸಿದೆ.

ಅಸ್ಟ್ರಾಜೆನೆಕಾ ಐರೋಪ್ಯ ಒಕ್ಕೂಟದಲ್ಲಿ ಕೋವಿಡ್ ಲಸಿಕೆಯ ಮಾರಾಟವನ್ನು ಈಗಾಗಲೇ ಸ್ಥಗಿತಗೊಳಿಸಿದೆ. ಇನ್ನು ಮುಂದೆ ಲಸಿಕೆ ತಯಾರಿಸುವುದಿಲ್ಲ ಮತ್ತು ಮಾರಾಟ ಮಾಡುವುದಿಲ್ಲ ಎಂದಿದೆ. ಇದೇ ರೀತಿ ಇತರ ರಾಷ್ಟ್ರಗಳಲ್ಲೂ ವಾಪಸ್ ಪಡೆಯಲು ನಿರ್ಧರಿಸಲಾಗಿದೆ ಎಂದಿದೆ.

ಅಸ್ಟ್ರಾಜೆನೆಕಾದ ಕೋವಿಡ್ ಲಸಿಕೆಯಿಂದ ಭಾರೀ ಅಡ್ಡಪರಿಣಾಮಗಳು ಬೀರಿವೆ. ಇದರಿಂದ ಅನೇಕ ಜನರು ಅಂಗಾಗ ವೈಫಲ್ಯದಂತ ಸಮಸ್ಯೆಗೆ ಸಿಲುಕಿದ್ದಾರೆ. ಲಸಿಕೆಯಿಂದ ಸಾವುಗಳೂ ಸಂಭವಿಸಿವೆ ಎಂದು ಆರೋಪಿಸಿ ಯುಕೆಯಲ್ಲಿ ಅಸ್ಟ್ರಾಜೆನೆಕಾ ವಿರುದ್ಧ 100 ಮಿಲಿಯನ್ ಪೌಂಡ್ ಮೊತ್ತದ ಮೊಕ್ಕದ್ದಮೆ ಹೂಡಲಾಗಿದೆ.

ಅರ್ಜಿದಾರರು ಮಾಡಿರುವ ಆರೋಪಗಳನ್ನು ನ್ಯಾಯಾಲಯದಲ್ಲಿ ಒಪ್ಪಿಕೊಂಡಿರುವ ಅಸ್ಟ್ರಾಜೆನೆಕಾ ತನ್ನ ಕೋವಿಡ್ ಲಸಿಕೆ 'Thrombosis with Thrombocytopenia Syndrome'(TTS) ನಂತಹ ಅಪರೂಪದ ಅಡ್ಡ ಪರಿಣಾಮಗಳನ್ನು ಉಂಟು ಮಾಡಬಹುದು ಎಂದಿದೆ.

TTS ಮಾನವರಲ್ಲಿ ರಕ್ತ ಹೆಪ್ಪುಗಟ್ಟುವಿಕೆ ಮತ್ತು ರಕ್ತದಲ್ಲಿ ಪ್ಲೇಟ್‌ಲೆಟ್ ಕೊರತೆಗೆ ಕಾರಣವಾಗುತ್ತದೆ. ಈ ಕಾರಣಗಳಿಂದ ಯುಕೆಯಲ್ಲಿ 81ಕ್ಕೂ ಅಧಿಕ ಸಾವುಗಳು ಸಂಭವಿಸಿವೆ ಎಂದು ಆರೋಪಿಸಲಾಗಿದೆ. ಆದರೆ, ಕೋವಿಡ್ ಲಸಿಕೆ ಹಿಂತೆಗೆದುಕೊಳ್ಳುವ ನಿರ್ಧಾರ ನ್ಯಾಯಾಲಯದ ಪ್ರಕರಣಕ್ಕೆ ಸಂಬಂಧಿಸಿದ್ದಲ್ಲ ಎಂದು ಅಸ್ಟ್ರಾಜೆನೆಕಾ ಹೇಳಿದೆ.

## ತಾಲೂಕಾಸ್ಪತ್ರೆಯ ಅವ್ಯವಸ್ಥೆಗೆ ಲೋಕಾಯುಕ್ತ ಡಿವೈಎಸ್ಪಿ ಗರಂ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ತಾಲೂಕಾ ಆಸ್ಪತ್ರೆಗೆ ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ನೇತೃತ್ವದ ತಂಡ ಆಕಸ್ಮಿಕವಾಗಿ ಭೇಟಿ ನೀಡಿದ ಸಂದರ್ಭದಲ್ಲಿ ಆಸ್ಪತ್ರೆಯ ಅವ್ಯವಸ್ಥೆಯನ್ನು ಕಂಡು ಗರಂ ಆಗಿ ಅಲ್ಲಿಯ ಸಿಬ್ಬಂದಿಗಳಿಗೆ ಶಿಸ್ತು ಕ್ರಮದ ಕುರಿತು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಡಿಎಸ್‌ಪಿ ವಿಜಯಕುಮಾರ ಬಿರಾದಾರ, ತಾಲೂಕಾ ಆಸ್ಪತ್ರೆಯಾಗಿದ್ದರೂ ಸಹ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯವಿಲ್ಲ, ಕುಡಿಯುವ ನೀರಿನ ವ್ಯವಸ್ಥೆ ಸರಿ ಇಲ್ಲ. ಬಿಸಿ ನೀರಿನ ವ್ಯವಸ್ಥೆಯಿಲ್ಲ. ರೋಗಿಗಳಿಗೆ ಸಮರ್ಪಕ ಸ್ಥಳಾವಕಾಶವಿಲ್ಲದೆ ಕಾರಿಡಾರ್‌ನಲ್ಲೇ ಮಲಗಿದ್ದು ಕಂಡು ಬಂದಿದೆ. ಜೊತೆಗೆ 2 ಜನ ಸಿಬ್ಬಂದಿಗಳು ಅನಧಿಕೃತವಾಗಿ ಗೈರು ಹಾಜರಾಗಿದ್ದಾರೆ. ತಡವಾಗಿ ಆಗಮಿಸುವ ವೈದ್ಯರು ಮತ್ತು ಸಿಬ್ಬಂದಿಗೂ ಎಚ್ಚರಿಕೆ ನೀಡಲಾಗಿದೆ. ಓರ್ವ ವೈದ್ಯ ಆಸ್ಪತ್ರೆಯಲ್ಲಿ ಔಷಧಿ ಇದ್ದರೂ ಸಹ



ಹೊರಗಡೆ ಔಷಧಿ ತರುವಂತೆ ರೋಗಿಗೆ ಬರೆದುಕೊಟ್ಟಿದ್ದು ಸಹ ಕಂಡು ಬಂದಿತು. ಈ ಎಲ್ಲ ನ್ಯೂನತೆಗಳ ಬಗ್ಗೆ ಸವಿಸ್ತಾರವಾಗಿ ರಾಜ್ಯ ಲೋಕಾಯುಕ್ತರಿಗೆ ಶಿಸ್ತು ಕ್ರಮ ಜರುಗಿಸುವಂತೆ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು.

ಸಿಬ್ಬಂದಿಗಳಾದ ಎಚ್.ಸಿ. ಅಮರಶೆಟ್ಟರ, ನೈನಾಪೂರ ಮುಂತಾದವರು ಉಪಸ್ಥಿತರಿದ್ದರು.

## ಸಂಪಾದಕೀಯ

### ಮಾಧ್ಯಮಗಳು ಸಂಯಮ ತೋರಲಿ

ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣ ಈಗ ದೇಶಾದ್ಯಂತ ಮಾತ್ರವಲ್ಲ ವಿದೇಶದಲ್ಲೂ ಚರ್ಚೆಗೆ ಕಾರಣವಾಗಿದೆ. ಪ್ರಜ್ವಲ್ ರೇವಣ್ಣ ಬಂಧನಕ್ಕೆ ಎಸ್‌ಐಟಿ ಎಲ್ಲರಿಗೂ ಮುಂದಡಿ ಇಟ್ಟಿದೆ. ಇದೇ ಪ್ರಕರಣದಲ್ಲಿ ಶಾಸಕ ಎಚ್ ಡಿ ರೇವಣ್ಣ ಈಗ ಜೈಲು ಕಂಡಿದ್ದಾರೆ.

ಕರ್ನಾಟಕದಲ್ಲಿ ನಡೆದ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನದ ದಿನವೇ, ಪ್ರಜ್ವಲ್ ರೇವಣ್ಣ ಅವರದ್ದೇ ಎನ್ನಲಾದ ವಿಡಿಯೋ ಸಂಚಲನ ಸೃಷ್ಟಿಸಿತು. ಅದಾದ ಎರಡು ದಿನದಲ್ಲಿ ರಾಜ್ಯಾದ್ಯಂತ ಸಾಕಷ್ಟು ವಿಡಿಯೋಗಳು ಹರಿದಾಡಿ ಪ್ರಜ್ವಲ್ ಮಾನ ಹರಾಜಾಯಿತು.

ಈ ಪ್ರಕರಣವನ್ನ ನಾ ಮುಂದು ತಾ ಮುಂದು ಎನ್ನುವಂತೆ ಮಾಧ್ಯಮಗಳು ಪ್ರಸಾರ ಮಾಡಿದವು. ಸಮಯ ಮತ್ತು ಸಂದರ್ಭ ಪೂರಕವಾಗಿತ್ತು. ವಿದ್ಯುನ್ಮಾನ ಮಾಧ್ಯಮಗಳು ಅತಿ ರಂಜಿತವಾಗಿಯೇ ಆ ಪ್ರಕರಣವನ್ನು ಜನರ ಮುಂದಿಡುವ ಕೆಲಸ ಮಾಡಿದರು.

ದಿನ ಕಳೆದಂತೆ ಪ್ರಕರಣದ ವರದಿಯನ್ನು ಜವಾಬ್ದಾರಿಯುತವಾಗಿ ಮಾಡಬೇಕಿದ್ದ ಮಾಧ್ಯಮಗಳು, ಮತ್ತಷ್ಟು ರಂಜನೀಯವಾಗಿ ಬಿತ್ತರಿಸಿದವು. ಪ್ರಕರಣ ಯಾವೆಲ್ಲ ರೀತಿಯಲ್ಲಿ ತಿರುವು ಪಡೆದುಕೊಳ್ಳುತ್ತಾ ಸಾಗಿತೋ, ಅಷ್ಟೇ ರಂಜನೀಯವಾಗಿ ಮಾಧ್ಯಮಗಳು ಸುದ್ದಿಯನ್ನು ಪ್ರಸಾರ ಮಾಡಿದವು.

ಇದೇ ಸಂದರ್ಭದಲ್ಲಿ ಬಯಲಾದ ಇನ್ನಿತರ ಲೈಂಗಿಕ ಹಗರಣಗಳನ್ನು ಸಹ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ತಳುಕು ಹಾಕಿ ಪ್ರಸಾರ ಮಾಡಿದವು. ಹೆಣ್ಣು ಮಕ್ಕಳ ಮುಖವನ್ನು ಕಾಣದಂತೆ ವಿಡಿಯೋ ಪ್ರಸಾರ ಮಾಡಿದ್ದು ಬಿಟ್ಟರೆ, ವಿದ್ಯುನ್ಮಾನ ಮಾಧ್ಯಮದಲ್ಲಿ ಬಿತ್ತರವಾದ ದೃಶ್ಯಗಳು, ಬಳಸಿದ ವಾಕ್ಯಗಳು, ಹೇಳಿದ ರೀತಿ ನೀತಿ ಮಹಿಳೆಯರಿಗೆ ಅಸಹ್ಯ ಮೂಡಿಸಿತು.

ಪ್ರಕರಣ ಬೆಳಕಿಗೆ ಬಂದು 15ಕ್ಕೂ ಹೆಚ್ಚು ದಿನ ಕಳೆದರೂ, ಇನ್ನು ರಂಜನೆಯ ಸುದ್ದಿಗಳಿಗೆ ಬ್ರೇಕ್ ಬಿದ್ದಿಲ್ಲ. ಸ್ವಸ್ಥ ಸಮಾಜ ನಿರ್ಮಾಣ ಮಾಡಬೇಕಾದ ಮಾಧ್ಯಮಗಳು, ಇನ್ನಾದರೂ ಸ್ವಲ್ಪ ಸಂಯಮದಿಂದ ವರ್ತಿಸಬೇಕು. ಅದು ಮಾಧ್ಯಮಗಳ ಜವಾಬ್ದಾರಿಯೂ ಹೌದು ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

**ಲೋಕಸಭಾ ಚುನಾವಣೆಯೊಳಗ ಮುಂಜಾನಿಂದ ಸಂಜೀವರ್ಗೂ...**

# ಚುನಾವಣಾ ಡ್ಯೂಟಿ ಅಂದ್ರ ತಮಾಷಿ ಅಲ್ರೀ!

ಮೇ 7ರ ಲೋಕಸಭಾ ಚುನಾವಣೆಯ ಮತದಾನದ ದಿನ, ಈ ದಿನ ನನ್ನ ಜೀವನದಾಗ ಮರಿಯೋದಕ್ಕೆ ಆಗೋದಿಲ್ಲ. ಯಾಕಂದ್ರ ನಾವು ಪ್ರತಿ ಚುನಾವಣೆ ಒಳಗೂ ಮತಾ ಹಾಕಿ ಅಷ್ಟ ಗೊತ್ತಿತ್ತು. ಯಾವ ರೀತಿ ಚುನಾವಣೆ ನಡೆಯುತ್ತೆ ಅಂತಾ ನಾವು ನೋಡಿರಲಿಲ್ಲ. ಅದಕ್ಕ ಈ ಅವಕಾಶ ತಪ್ಪೋಸ್ಕೋಬಾರ್ದು ಅಂತ ನನಗ ಮತ್ತ ನನ್ನ ಗೆಳತಿಗೆ ಇಬ್ರಿಗೂ ಇತ್ತು. ಒಂದ ಸರಿನು ಚುನಾವಣೆ ಡ್ಯೂಟಿ ಮಾಡಿರಲಿಲ್ಲ! ಖರೆ ಹೇಳ್ಬೇಕು ಅಂದ್ರೆ ನಮಗ್ ಚುನಾವಣೆ ಡ್ಯೂಟಿ ಹಾಕಿರಲಿಲ್ಲ. ಆದ್ರೂ ಸಹ ನಾವು ನಮ್ಮ ಪ್ರಯತ್ನ ಮಾತ್ರ ಬಿಡಲಿಲ್ಲ. ನಾವು ಚುನಾವಣೆ ಡ್ಯೂಟಿಗೆ ಬರ್ತೀವಿ ಅಂತ ನಮ್ಮ ಕಚೇರಿಯ ಮೇಡಂ ಅವರಿಗೆ ಕೇಳಿದೆವು. ಅವರು ನಗುಮೊಗದಿಂದ ನೀವು ಸಹ ನಮ್ಮ ಜೊತೆಗೆ ಬರಬಹುದು ಅಂದ್ರು. ಅವರ ಆ ಮಾತನ್ನು ಕೇಳಿ ಖುಷಿ ತಡೆಯದಾಯಿತು.

ನಾವು ಬೆಳಿಗ್ಗೆ 9 ಗಂಟೆಗೆ ನಮ್ಮ ಕಚೇರಿ ವಾಹನ ಹತ್ತಿದ್ವಿ. ನಮ್ಮ ಕಚೇರಿ ಸಿಬ್ಬಂದಿ ಅವರು ಅಷ್ಟೇ ಅಲ್ಲಾ ನಮ್ಮ ಎಲ್ಲಾ ಪತ್ರಿಕೆ, ಮಾಧ್ಯಮ ಮಿತ್ರರು ಇದ್ರು. ಎಲ್ಲರೂ ಬಾಳ ಚಲೋ ಜನಾ! ನಾವು ಫಸ್ಟ್ ಟೈಮ್ ಹೋಗಿರೋದ್ರಿಂದ ಭಯಾ ಇತ್ತು. ಆದ್ರ ಅವರು ನಮ್ಮ ಜೊತೆ ನಡ್ಕೊಂಡ ರೀತಿ ನನಗ ಭಾಳ ಖುಷಿ ಕೊಟ್ಟಿತ್ತು. ಕುಂದಗೋಳ ತಾಲೂಕಿನ ಕೆಲವು ಹಳ್ಳಿಗೆ ಹೋಗಿ ಚುನಾವಣೆ ಹೆಂಗ ನಡಿಯಾತೆತಿ ನೋಡಿ ತಿಳ್ಕೊಂಡು ಲಾಸ್ಟಿಗೆ ಚಿಕ್ಕನೇರ್ತಿ ಬಂದು ರೊಟ್ಟಿಗವಾಡ ಗ್ರಾಮದ ಮೂಲಕ ಹುಬ್ಳಿಗೆ ಗಾಡಿ ಬಿಟ್ವಿ. ಹುಬ್ಳಿಗೆ ಬಂದಾಗ ಸಮಯ 2.30 ಆಗಿತ್ತು. ಊಟ ಮಾಡಿ ಕಚೇರಿಗೆ ಹೋದಾಗ 3.30 ಗಂಟೆ ಆಗಿತ್ತು.

ನಾವು ಹೋಗಿ ಬಂದಿರೋ ಸುದ್ದಿ ಮಾಡಿ ಕಳ್ಸಿ 5 ಗಂಟೆಗೆ ಮನಿಗೆ ಹೋದ್ರಾಯ್ತು ಅಂತೇಳಿ ಹೊರಗ ಬಂದ್ವಿ. ನಾನು ನನ್ನ ಗೆಳತಿ ಬಸ್‌ಗೆ ಹೋಗಾಕ ಬಸ್ ಸ್ಟಾಪ್‌ಗೆ ಹೋದ್ವಿ. ಅಲ್ಲಿ ಬಸ್ ಬಂದಾಗ 6 ಗಂಟೆ ಆಗಿತ್ತು. ಅಂತೂ ಇಂತೂ ಹುಬ್ಳಿ-ಧಾರವಾಡ ಬಸ್ ಬಂತು. ನಾವು ಹತ್ತಿದಾಗ ಬಸ್ ಖಾಲಿನ ಇತ್ತು! ಬಸ್ ಹತ್ತಿದ್ವೀ ಹೆಣ್ಮಕ್ಕಳಿಗೆ ಫ್ರೀ ಟಿಕೆಟ್ ಇದ್ದಿದ್ದರಿಂದ ಟಿಕೇಟ್ ತಗೊಂಡ್ವಿ.



ಬಸ್ ಹುಬ್ಳಿ ಬಸ್ ಸ್ಟ್ಯಾಂಡ್ ಬರುತ್ತಿದ್ದ ಹಾಗೇ ಬಸ್ ಫುಲ್ ಆಯ್ತು. ಸಮಯ 6 ಗಂಟೆಗೆ ಆದ್ರೂ ಸಹ ಸೂರ್ಯನ ಉರಿ ಬಿಸಿಲು ಕಡ್ಮಿ ಅಂತೂ ಆಗಿರಲಿಲ್ಲಾ! ಚುನಾವಣೆ ಇರೋದಕ್ಕೊ ಏನೋ ನನಗ ಗೊತ್ತಿಲ್ಲಾ ಬಸ್ ಕಮ್ಮಿ ಇದ್ವು. ಒಂದೇ ಬಸ್ ಅಲ್ಲಿ ಜನ ತುಂಬಿದ್ರು. ನಾವು ಪೂರ್ತಿ ಲಾಸ್ಟಿಗೆ ಕೂತಿದ್ವಿ. ಸಣ್ಣ ಹುಡುಗಾ ಜಳ ಬಾಳ ಇರೋದಕ್ಕ ಅದು ಅಳ್ತಾಯಿತು. ಅದಕ್ಕ ನನ್ನ ಗೆಳತಿ ದೊಡ್ಡ ಮನಸ ಮಾಡಿ ಆ ಹುಡ್ಗನ್ನ ತನ್ನ ಕಡೆ ತಗೊಂಡ ಕುರಸಕೊಂಡ್ಲು. ಅವಾಗ ಅದು ಸುಮ್ಮ್ ಏನೋ ಆಯ್ತು, ಅದ್ರ ಇರ್ಲಾರದ ಇರವಿ ಬಿಟಗೊಂಡಂಗ್ ಆಗಿತ್ತು. ಹುಡುಗ ಬಾಳ ಉಡಾಳ ಇತ್ತು. ನನ್ನ ಗೆಳತಿಗೆ ಹುಡುಗನನ್ನ ಸುಮ್ಮ ಕುರ್ಸುದ್ರಾಗ ಸಾಕಾಗಿ ಹೋಗಿತ್ತು!

ಅಷ್ಟರಾಗ ಅಲ್ಲಿಂದ ಒಂದು ಧ್ವನಿ ಕೇಳ್ತು. ನಮಗೂ ಹೆಂಡ್ರು ಮಕ್ಳು ಅದಾರ.... ನಿಮಗಷ್ಟ ಅಲ್ಲಾ....ಅಂತೇಳಿ ಆ ಮಾತು ಕೇಳಿದ ಕೂಡಲೇ ನನ್ನ ಗಮನ ಆ ಕಡೆನ ಹೋಯ್ತು. ನಾನು ಏನ್ ಅಂದ್ರು ಅವರು ಅಂದೆ. ಆಕಿ ಹೇಳಿದ್ಲು ಹಿಂಗ್ ಅಂದ್ರು ಅಂತೇಳಿ ಅಂದು ಸುಮ್ಮ ಇರ್ಲಿಲ್ಲ. ಮತ್ತ ಏನ ಅಂದ್ಲು ಕೇಳಿದೆ. ಲೇಖನ ಬರೀಲಿಕ್ಕೆ ಒಳ್ಳೆ ಹೆಡ್ಲೈನ್ ನೋಡ ಅಂದ್ಲು. ಅಕಿ ಅಷ್ಟ ಅಂದಿದ್ದ ತಡಾ ನಾನ ಮೊಬೈಲ್ ತಗೊಂಡು ಆ ಹೆಡ್ಲೈನ್ ಕೊಟ್ಟೆ ಮತ್ತ ಮರಿಬಾರ್ದು ಅಂತೇಳಿ. ಈಗ ವಿಷಯಕ್ಕೆ ಬರ್ತೀನಿ ಆ ಮಾತು ಅಂದಿದ್ದ ಬೇರೆ ಯಾರು ಅಲ್ಲಾ ನಾವು ಕುಂತಿದ್ದ ಬಸ್ ಕಂಡಕ್ಟರ್! ಈಗ ಬಸ್ ಫ್ರೀ ಮಾಡಿದಕ್ಕ ಬಸ್ ರಷ್ ಆಗ್ಲೀಕತ್ತಾವೋ ಅಥವಾ ಬಸ್ ಕಮ್ಮಿ ಅಗ್ಯಾವೋ ಗೊತ್ತ ಅಗವಲ್ದು. ಮೊದ್ಲು ಗಂಡಮಕ್ಳು ಮೆಟ್ಟಲ ಕಡೆ ನಿಲ್ಲೋ ಕಾಲ ಒಂದಿತ್ತು. ಈಗ ಅದು ಹೊಗೆದ. ಹೆಣ್ಮಕ್ಕಳು ಅಲ್ಲೇ ನಿಲ್ಲೋ ಪರಿಸ್ಥಿತಿ ಬಂದೇತಿ. ಹಿಂಗಾಗಿ ಕಂಡಕ್ಟರ್ ಟಿಕೆಟ್ ಕೊಡಾಕ ಹತ್ತಾಗ ಒಬ್ಬಕಿ ಹೆಣ್ಮಗಳು ಅಲ್ಲೇ ನಿಂತಿದ್ಲು. ಒಳಗ ಬರಾಕ ಜಗಾ ಇಲ್ಲಾ ಕಂಡಕ್ಟರ ಒಳಗ ಬಾ ಅನ್ನಾಕತ್ತನಾ.. ಬಸ್ ನೋಡಿದ್ರೆ ಎತ್ತಿನ ಗಾಡಿಕ್ಕಿಂತ ಸ್ಲೋ ಇತ್ತು. ಕಂಡೆಕ್ಟರ್‌ಗೂ



ಸಾಕಾಗಿತ್ತು. ಕಂಡಕ್ಟರ್‌ಗ ಎನ್ ಚಿಂತಿ ಆಂದ್ರ ಆಕಿ ಬೀಳ್ತಾಳ ಅನ್ನೋದಕ್ಕಿಂತ ಆಕಿ ಬಿದ್ರ ನನ್ನ ಮೇಲೆ ಕೇಸ್ ಅಕ್ಕೇತಿ ಅನ್ನೋದ ತಲಿ ಒಳಗ ಇತ್ತು ಕಾಣುತ್ತಾ! ಅದಕ್ಕ ಆ ಕಂಡಕ್ಟರ್‌ನ ಬಾಯಿ ಒಳಗ ನಮಗೂ ಹೆಂಡ್ರು ಮಕ್ಳು ಅದಾರ.... ನಿಮಗಷ್ಟ ಅಲ್ಲಾ ಅಂತೇಳಿ ಬಂತು ನೋಡ್ರಿ.....!

– ಶಿಲ್ಪಾ ವಾಲಿಕಾರ.
ಪ್ರಶಿಕ್ಷಣಾರ್ಥಿ, ರಾಜ್ಯ ಸಮಾಚಾರ ಕೇಂದ್ರ.
ಹುಬ್ಬಳ್ಳಿ.

## ಪ್ರಜ್ವಲ್ ಲೈಂಗಿಕ ಹಗರಣ | ಮೇ 14ರವರೆಗೆ ಎಚ್ ಡಿ ರೇವಣ್ಣಗೆ ನ್ಯಾಯಾಂಗ ಬಂಧನ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಲೈಂಗಿಕ ಪ್ರಕರಣಕ್ಕೆ ಪೂರಕವಾಗಿ ಸಂತ್ರಸ್ತ ಮಹಿಳೆಯ ಅಪಹರಣ ಪ್ರಕರಣದಲ್ಲಿ ಬಂಧಿತರಾಗಿರುವ ಜೆಡಿಎಸ್ ಮುಖಂಡ ಹಾಗೂ ಮಾಜಿ ಸಚಿವ ಎಚ್ ಡಿ ರೇವಣ್ಣರಿಗೆ ನ್ಯಾಯಾಲಯವು ಮೇ 14ರವರೆಗೆ ನ್ಯಾಯಾಂಗ ಬಂಧನ ವಿಧಿಸಿದೆ.

ಸಂತ್ರಸ್ತ ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿ ಎಸ್‌ಐಟಿ ಕಸ್ಟಡಿಗೆ ಮೇ 8ರವರೆಗೆ ನೀಡಲಾಗಿತ್ತು. ಇಂದು ಮತ್ತೆ ಬೆಂಗಳೂರಿನ 17ನೇ ಎಸಿಎಂಎಂ ನ್ಯಾಯಾಲಯದ ನ್ಯಾಯಾಧೀಶ ರವೀಂದ್ರಕುಮಾರ್ ಬಿ. ಕಟ್ಟಿಮನಿ ಅವರ ಮುಂದೆ ಹಾಜರುಪಡಿಸಿದಾಗ, "ರೇವಣ್ಣ ತನಿಖೆಗೆ ಸಹಕರಿಸುತ್ತಿಲ್ಲ. ಹೀಗಾಗಿ, ಅವರನ್ನು ಎಸ್‌ಐಟಿ ವಶಕ್ಕೆ ನೀಡಬೇಕು" ಎಂದು ವಿಶೇಷ ಸರ್ಕಾರಿ ಅಭಿಯೋಜಕ ಬಿ ಎನ್ ಜಗದೀಶ್ ಕೋರಿದರು. ಇದಕ್ಕೆ ಒಪ್ಪದ ಪೀಠವು ರೇವಣ್ಣರನ್ನು ಮೇ 14ರವರೆಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ.

ರೇವಣ್ಣ ಪರ ವಕೀಲ ಮೂರ್ತಿ ಡಿ. ನಾಯ್ಕ್ ಅವರು ವಾದ ಮಂಡಿಸಿದ್ದರು. ನ್ಯಾಯಾಂಗ ಬಂಧನ ವಿಧಿಸಿರುವ ಹಿನ್ನೆಲೆಯಲ್ಲಿ ಎಸ್‌ಐಟಿ ಅಧಿಕಾರಿಗಳು, ಪರಪ್ಪನ ಅಗ್ರಹಾರ ಜೈಲಿಗೆ ಕರೆದೊಯ್ಯಲಿದ್ದಾರೆ ಎಂದು ತಿಳಿದುಬಂದಿದೆ.

ಸುದ್ದಿ ನಿರಂತರವಾಗಿ ಉಚಿತವೇ ಆಗಿರುವುದು ಹೇಗೆ ಸಾಧ್ಯ? ಅದಕ್ಕೆ ನಿಮ್ಮ ಬೆಂಬಲವೂ ನಿರಂತರವಾಗಿ ಇದ್ದಾಗ ಮಾತ್ರ ಸಾಧ್ಯ. ಚಂದಾದಾರರಾಗಿ ಆ ಮೂಲಕ ಸತ್ಯ, ನ್ಯಾಯ, ಪ್ರೀತಿ ಮೌಲ್ಯಗಳನ್ನು ಎಲ್ಲರಿಗೂ ಹರಡಲು ಜೊತೆಯಾಗಿ.

ನಾಳೆ ಜಾಮೀನು ಅರ್ಜಿ ವಿಚಾರಣೆ

ಈ ಮಧ್ಯೆ ಎಚ್.ಡಿ ರೇವಣ್ಣ ಅವರ ಜಾಮೀನು ಅರ್ಜಿ ವಿಚಾರಣೆಯನ್ನು ಜನಪ್ರತಿನಿಧಿ ನ್ಯಾಯಾಲಯದಲ್ಲಿ ನಾಳೆಗೆ ಮುಂದೂಡಿಕೆ ಮಾಡಲಾಗಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಮಹತ್ವದ ಆದೇಶ ನೀಡಿ, ನಾಳೆಗೆ ಜಾಮೀನು ಅರ್ಜಿಯ ವಿಚಾರಣೆ ಮುಂದೂಡಿದ್ದಾರೆ.

## ಮೋದಿ ಆಡಳಿತದಲ್ಲಿ ಭಾರತದ ಇಮೇಜ್ ಜಾಗತಿಕವಾಗಿ ಸುಧಾರಿಸಿಲ್ಲ: ವರದಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಳೆದ ಒಂದು ದಶಕದಲ್ಲಿ ಅಂದರೆ ಮೋದಿ ಆಡಳಿತದಲ್ಲಿ 'ಭಾರತದ ಜಾಗತಿಕ ಖ್ಯಾತಿಯು ಸುಧಾರಣೆಯನ್ನು ಕಂಡಿಲ್ಲ' ಎಂಬ ಮಹತ್ವದ ಅಂಶವನ್ನು ವರದಿಯೊಂದು ಬಹಿರಂಗ ಮಾಡಿದೆ. ಈ ವರದಿಯನ್ನು ಅಂತರಾಷ್ಟ್ರೀಯ ಖ್ಯಾತಿಯ ಎರಡು ಪ್ರಮುಖ ಶಿಕ್ಷಣ ತಜ್ಞರು ಸಮೀಕ್ಷೆಗಳು ಮತ್ತು ಅಭಿಪ್ರಾಯ ಸಂಗ್ರಹಣೆ ಮೂಲಕ ಸಿದ್ಧಪಡಿಸಿದ್ದಾರೆ. ಈ ವರದಿಯು ಮೋದಿಯನ್ನು 'ವಿಶ್ವಗುರು' ಎಂದು ಹೇಳುತ್ತಿರುವ ಬಿಜೆಪಿಗೆ ಮತ್ತು ಕೆಲ ಮಾಧ್ಯಮಗಳಿಗೆ ದೊಡ್ಡ ಹಿನ್ನಡೆ ಉಂಟುಮಾಡಿದೆ.

'ದಿ ಮೋದಿ ಮಿರಾಜ್: ಇಲ್ಯೂಷನ್ಸ್ ಅಂಡ್ ರಿಯಾಲಿಟಿ ಆಫ್ ಇಂಡಿಯಾಸ್ ಗ್ಲೋಬಲ್ ಸ್ಟ್ಯಾಂಡಿಂಗ್ ಅಂಡ್ ರೆಪ್ಯೂಟೇಶನ್' ಎಂಬ ವರದಿಯನ್ನು ಜಾರ್ಜ್‌ಟೌನ್ ವಿಶ್ವವಿದ್ಯಾಲಯದ ಪ್ರೊಫೆಸರ್ ಇರ್ಫಾನ್ ನೂರುದ್ದೀನ್ ಮತ್ತು ನೆದರ್‌ಲ್ಯಾಂಡ್‌ನ ಗ್ರೋನಿಂಗನ್ ವಿಶ್ವವಿದ್ಯಾಲಯದ ಡಾ.ರೀತುಂಬ್ರಾ ಮನುವಿ ಸಿದ್ಧಪಡಿಸಿದ್ದಾರೆ. ಇದಲ್ಲದೆ ಲಂಡನ್ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಓರಿಯಂಟಲ್ ಮತ್ತು ಆಫ್ರಿಕನ್ ಸ್ಟಡೀಸ್‌ನ ಡಾ ಸುಬೀರ್ ಸಿನ್ಹಾ ಅವರು ವರದಿ ಸಿದ್ಧಪಡಿಸುವ ವೇಳೆ ಪ್ರಧಾನ ಸಲಹೆಗಾರರಾಗಿದ್ದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾರತದ ಜಾಗತಿಕ ಸ್ಥಾನಮಾನವನ್ನು ಹೆಚ್ಚಿಸಿದ್ದಾರೆ, ಮೋದಿ ಜಗತ್ತಿನಲ್ಲಿ ಭಾರೀ ಪ್ರಭಾವ ಬೀರಿದ್ದಾರೆ, ಮೋದಿ ಅಡಳಿತದಲ್ಲಿ ಭಾರತದ ಇಮೇಜ್ ಜಾಗತಿಕವಾಗಿ ಹೆಚ್ಚಾಗಿದೆ ಎಂದು ಆಡಳಿತ ಪಕ್ಷವು ಆಗಾಗ್ಗೆ ಪ್ರತಿಪಾದಿಸುತ್ತಿದೆ ಎಂದು ವರದಿಯಲ್ಲಿ ಲೇಖಕರು ಉಲ್ಲೇಖಿಸಿದ್ದು, ಈ ನಿರೂಪಣೆಯನ್ನು ಭಾರತೀಯ ಮಾಧ್ಯಮಗಳು ಹೆಚ್ಚಾಗಿ ಪ್ರಚಾರ ಮಾಡುತ್ತಿದೆ ಎಂದು ಹೇಳಿದೆ.

ಭಾರತೀಯರು ತಮ್ಮ ದೇಶದ ಜಾಗತಿಕ ಖ್ಯಾತಿಯ ಬಗ್ಗೆ ಹೆಚ್ಚು ಕಾಳಜಿ ವಹಿಸುತ್ತಾರೆ, ಆದ್ದರಿಂದ ಭಾರತವು ಇತಿಹಾಸದಲ್ಲಿ ಅತಿದೊಡ್ಡ ಚುನಾವಣೆಯನ್ನು ಪ್ರಾರಂಭಿಸುತ್ತಿರುವಾಗ ಮೋದಿ ಈ ವಿಷಯದಲ್ಲಿ ಯಶಸ್ವಿಯಾಗಿದ್ದಾರೆಯೇ ಅಥವಾ ಇಲ್ಲವೇ ಎಂಬುವುದು ಬಹಳ ಮಹತ್ವದ್ದಾಗಿದೆ ಎಂದು ವರದಿ ಹೇಳಿದೆ.

**ಲೋಕಸಭಾ ಚುನಾವಣೆ 2024**

## ಸಮಸ್ಯೆ ಪರಿಹರಿಸದ ಗುಜರಾತ್ ಸರ್ಕಾರ; ಮತದಾನ ಬಹಿಷ್ಕರಿಸಿದ ಹಲವು ಗ್ರಾಮಸ್ಥರು

■ ವಿಜಯಸಾಕ್ಷಿ ಸುದ್ದಿ, ಗುಜರಾತ್

ತಮ್ಮ ದೀರ್ಘ ಕಾಲದ ಬೇಡಿಕೆಯನ್ನು ಗುಜರಾತ್ ಸರ್ಕಾರ ಈಡೇರಿಸಿಲ್ಲ ಎಂಬ ಕಾರಣಕ್ಕೆ ಮೂರು ಗ್ರಾಮಗಳ ಸುಮಾರು ಒಂದು ಸಾವಿರ ಮತದಾರರು ಮಂಗಳವಾರ ಲೋಕಸಭೆ ಚುನಾವಣೆಯಲ್ಲಿ ಮತದಾನವನ್ನು ಬಹಿಷ್ಕರಿಸಿದ್ದಾರೆ ಎಂದು ವರದಿಯಾಗಿದೆ. ಜೊತೆಗೆ, ಹಲವು ಗ್ರಾಮಗಳ ಜನರು ಸರ್ಕಾರದಿಂದ ತಮ್ಮ ಈಡೇರದ ಬೇಡಿಕೆಗಳಿಂದ ಭಾಗಶಃ ಚುನಾವಣಾ ಪ್ರಕ್ರಿಯೆಯಿಂದ ದೂರ ಉಳಿದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಾಥಮಿಕ ಮಾಹಿತಿಯಂತೆ, ಭರೂಚ್ ಜಿಲ್ಲೆಯ ಕೇಸರ್ ಗ್ರಾಮ, ಸೂರತ್ ಜಿಲ್ಲೆಯ ಸನಾಧಾರ ಮತ್ತು ಬನಸ್ಕಾಂತ ಜಿಲ್ಲೆಯ ಭಖಾರಿ ಮತದಾರರು ಮತದಾನವನ್ನು ಸಂಪೂರ್ಣವಾಗಿ ಬಹಿಷ್ಕರಿಸಿದರೆ, ಜುನಾಗಢ ಜಿಲ್ಲೆಯ ಭಟ್ಗಾವ್ ಗ್ರಾಮ ಮತ್ತು ಬೋಡೋಲಿ ಮತ್ತು ಬೋಡೋಲಿ ಮತ್ತು ಮಹಿಸಾಗರ ಜಿಲ್ಲೆಯ ಕುಂಜರ ಗ್ರಾಮಗಳು ಚುನಾವಣೆಯನ್ನು ಭಾಗಶಃ ಬಹಿಷ್ಕರಿಸಿದವು. ಸನಧಾರ



ಗ್ರಾಮವು ಬಾರ್ಡೋಲಿ ಲೋಕಸಭಾ ಕ್ಷೇತ್ರಕ್ಕೆ ಒಳಪಡುತ್ತದೆ ಮತ್ತು 320 ಮತದಾರರನ್ನು ಹೊಂದಿದೆ.

ಚುನಾವಣಾ ಆಯೋಗದ ವರದಿಯ ಪ್ರಕಾರ, ಸ್ಥಳೀಯ ಚುನಾವಣಾ ಆಡಳಿತ ಮತ್ತು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹೊರಬರಲು, ತಮ್ಮ ಹಕ್ಕು ಚಲಾಯಿಸುವಂತೆ ಮನವೊಲಿಸಲು ಪ್ರಯತ್ನಿಸಿದರೂ 320 ಮತದಾರರಲ್ಲಿ ಯಾರೊಬ್ಬರೂ ಮತ ಚಲಾಯಿಸಲಿಲ್ಲ ಎನ್ನಲಾಗಿದೆ.

ಪಟಾನ್ ಸಂಸದೀಯ ಕ್ಷೇತ್ರಕ್ಕೆ ಒಳಪಡುವ ಬಕ್ರಿ ಗ್ರಾಮದ ಸುಮಾರು 300 ಮತದಾರರು ತಮ್ಮ ಗ್ರಾಮ ಪಂಚಾಯಿತಿ ವಿಭಜನೆಯನ್ನು ವಿರೋಧಿಸಿ ಸಾಮೂಹಿಕವಾಗಿ ಮತದಾನ ಬಹಿಷ್ಕರಿಸಲು ನಿರ್ಧರಿಸಿದ್ದಾರೆ. ಮನವೊಲಿಕೆಯ ಹೊರತಾಗಿಯೂ, ಅವರು ತಮ್ಮ ಮತದಾನದ ಹಕ್ಕನ್ನು ಚಲಾಯಿಸದ ನಿರ್ಧಾರದಲ್ಲಿ ದೃಢವಾಗಿ ಉಳಿದರು.

ಬೆಳಗ್ಗೆಯಿಂದಲೇ ಚುನಾವಣಾ ಸಿದ್ಧತೆ ನಡೆದಿದ್ದು, ಮತಗಟ್ಟೆ ಅಧಿಕಾರಿಗಳು ಕಾದು ಕುಳಿತಿದ್ದರೂ ಗ್ರಾಮಸ್ಥರು ಮತದಾನಕ್ಕೆ ಬಾರದೆ ಹೋಗಿದ್ದರು. ತಮ್ಮ ಗ್ರಾಮ ಪಂಚಾಯತಿ ವಿಂಗಡಣೆಯ ಬಗ್ಗೆ ಗ್ರಾಮಸ್ಥರು ಅಸಮಾಧಾನಗೊಂಡಿದ್ದಾರೆ ಎಂದು ಅವರು ಹೇಳಿದರು.

ಭಾರತೀಯ ಜನತಾ ಪಕ್ಷದ (ಬಿಜೆಪಿ) ಅಭ್ಯರ್ಥಿ ಭರತಸಿಂಹ ದಾಭಿ ಕೂಡ ಗ್ರಾಮಕ್ಕೆ ಆಗಮಿಸಿ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು. ಆದರೆ, ಯಾವುದೇ ಪ್ರಯೋಜನವಾಗಲಿಲ್ಲ. ಭರೂಚ್ ಜಿಲ್ಲೆಯ ಕೇಸರ್ ಗ್ರಾಮದ ಸುಮಾರು 350 ಮತದಾರರು ಮತದಾನ ಮಾಡದಿರುವ ತಮ್ಮ ನಿರ್ಧಾರದಲ್ಲಿ ಅಚಲವಾಗಿ ಉಳಿದರು ಮತ್ತು ದಿನದ ಅಂತ್ಯದ ವೇಳೆಗೆ ಒಂದೇ ಒಂದು ಮತವೂ ಚಲಾವಣೆಯಾಗಲಿಲ್ಲ.

ಮತದಾರರು ತಮ್ಮ ಮತಗಳನ್ನು ಬಹಿಷ್ಕರಿಸುವುದು ಇದೇ ಮೊದಲಲ್ಲ. ನದಿಗೆ ಸೇತುವೆ ನಿರ್ಮಿಸುವಂತೆ ಹಲವು ಬಾರಿ ಒತ್ತಾಯಿಸಿದರೂ ಸರ್ಕಾರ ಬೇಡಿಕೆ ಈಡೇರಿಸದ ಕಾರಣ ಈ ಹಿಂದೆಯೂ ಈ ರೀತಿ ಮಾಡಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಗುಜರಾತ್‌ನ ಒಟ್ಟು 26 ಲೋಕಸಭಾ ಸ್ಥಾನಗಳ ಪೈಕಿ 25 ಕ್ಷೇತ್ರಗಳಿಗೆ ಮಂಗಳವಾರ ಒಂದೇ ಹಂತದಲ್ಲಿ ಮತದಾನ ನಡೆದಿದೆ. ಭಾರತೀಯ ಜನತಾ ಪಕ್ಷ (ಬಿಜೆಪಿ) ಸೂರತ್ ಕ್ಷೇತ್ರವನ್ನು ಅವಿರೋಧವಾಗಿ ಗೆದ್ದಿದೆ.

## ಬಿಎಸ್ಪಿ ಉತ್ತರಾಧಿಕಾರಿ ಸ್ಥಾನದಿಂದ ಸೋದರಳಿಯ ಆಕಾಶ್ ಆನಂದ್‌ಗೆ ವಜಾ ಮಾಡಿದ ಮಾಯಾವತಿ

■ ವಿಜಯಸಾಕ್ಷಿ ಸುದ್ದಿ, ಯುಪಿ

ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ಮುಖ್ಯಸ್ಥೆ ಮತ್ತು ಯುಪಿ ಮಾಜಿ ಸಿಎಂ ಮಾಯಾವತಿ ಮಹತ್ವದ ನಿರ್ಧಾರವೊಂದನ್ನು ಪ್ರಕಟಿಸಿದ್ದು, ಸೋದರಳಿಯ ಆಕಾಶ್ ಆನಂದ್ ಅವರನ್ನು ತಮ್ಮ ಉತ್ತರಾಧಿಕಾರಿ ಮತ್ತು ಬಿಎಸ್ಪಿಯ ರಾಷ್ಟ್ರೀಯ ಸಂಯೋಜಕ ಹುದ್ದೆಯಿಂದ ತೆಗೆದು ಹಾಕಿದ್ದಾರೆ.

ಆಕಾಶ್ ಆನಂದ್ 'ರಾಜಕೀಯವಾಗಿ ಪ್ರಬುದ್ಧರಾಗುವವರೆಗೆ' ಅವರನ್ನು ಪಕ್ಷದ ಪ್ರಮುಖ ಹುದ್ದೆಗಳಿಂದ ವಜಾಗೊಳಿಸಿದ್ದೇನೆ ಎಂದು ಮಾಯಾವತಿ ಈ ಕುರಿತು ಹೊರಡಿಸಿದ ಆದೇಶದಲ್ಲಿ ತಿಳಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಮಾಯಾವತಿ, ನಾನು ಆಕಾಶ್ ಆನಂದ್ ಅವರನ್ನು ರಾಷ್ಟ್ರೀಯ ಸಂಯೋಜಕ ಮತ್ತು ಉತ್ತರಾಧಿಕಾರಿ ಎಂದು ಘೋಷಿಸಿದ್ದೆ, ಆದರೆ ಪಕ್ಷ ಮತ್ತು ಚಳವಳಿಯ ದೊಡ್ಡ ಹಿತಾಸಕ್ತಿಯಿಂದ ಅವರು ಪೂರ್ಣ ಪ್ರಬುದ್ಧತೆಯನ್ನು ಪಡೆಯುವವರೆಗೆ ಈ ಎರಡೂ ಪ್ರಮುಖ ಜವಾಬ್ದಾರಿಗಳಿಂದ ಅವರನ್ನು ವಜಾಗೊಳಿಸುವುದಾಗಿ



ಹೇಳಿದ್ದಾರೆ.

ಬಿಎಸ್ಪಿ ಬಾಬಾ ಸಾಹೇಬ್ ಡಾ.ಭೀಮರಾವ್ ಅಂಬೇಡ್ಕರ್ ಅವರ ಆತ್ಮಗೌರವ ಮತ್ತು ಸ್ವಾಭಿಮಾನದ ಸಂಕೇತ ಹಾಗೂ ಸಾಮಾಜಿಕ ಬದಲಾವಣೆಗಾಗಿ ಕಾನ್ಶಿರಾಂ ಅವರು ಕಟ್ಟಿದ ಚಳವಳಿ. ಇದಕ್ಕಾಗಿ ನಾನು ನನ್ನ ಇಡೀ ಜೀವನವನ್ನು ಸಮರ್ಪಿಸಿಕೊಂಡಿದ್ದೇನೆ ಮತ್ತು ಹೊಸ ಪೀಳಿಗೆ ಕೂಡಾ ಈ ಚಳವಳಿಗೆ ವೇಗ ನೀಡಲು ಸಜ್ಜಾಗಬೇಕು. ಆಕಾಶ್ ಅವರ ತಂದೆ ಆನಂದ್ ಕುಮಾರ್ ಅವರು ಪಕ್ಷದಲ್ಲಿ ತಮ್ಮ ಜವಾಬ್ದಾರಿಯನ್ನು ನಿರ್ವಹಿಸುತ್ತಾರೆ ಎಂದು ಹೇಳಿದ್ದಾರೆ.

ಏಪ್ರಿಲ್ 28ರಂದು, ಸೀತಾಪುರದಲ್ಲಿ ಚುನಾವಣಾ ರ್ಯಾಲಿಯಲ್ಲಿ ಆಕ್ಷೇಪಾರ್ಹ ಪದ ಬಳಸಿದ ಆರೋಪದ ಹಿನ್ನೆಲೆ ಆಕಾಶ್ ಆನಂದ್ ಮತ್ತು ಇತರ ನಾಲ್ವರ ವಿರುದ್ಧ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ದಾಖಲಾಗಿತ್ತು. ರ್ಯಾಲಿಯಲ್ಲಿ ಆನಂದ್ ಭಾಷಣದ ವಿರುದ್ಧ ಜಿಲ್ಲಾಡಳಿತ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿದ್ದಾರೆ. ಆನಂದ್ ಅಲ್ಲದೆ, ಬಿಎಸ್‌ಪಿ ಅಭ್ಯರ್ಥಿ ಮಹೇಂದ್ರ ಯಾದವ್, ಶ್ಯಾಮ್ ಅವಸ್ತಿ ಮತ್ತು ಅಕ್ಷಯ್ ಕಲ್ರಾ ಮತ್ತು ರ್ಯಾಲಿ ಆಯೋಜಕ ವಿಕಾಸ್ ರಾಜವಂಶಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಸೀತಾಪುರ ಪೊಲೀಸ್ ವರಿಷ್ಠಾಧಿಕಾರಿ ಚಕ್ರೇಶ್ ಮಿಶ್ರಾ ಹೇಳಿದ್ದಾರೆ.

ಈ ಸರ್ಕಾರ ಬುಲ್ಡೋಜರ್ ಸರ್ಕಾರ ಮತ್ತು ದೇಶದ್ರೋಹಿ ಸರ್ಕಾರ, ಯುವಕರನ್ನು ಹಸಿವಿನಿಂದ ಬಿಡುವ ಮತ್ತು ತನ್ನ ಹಿರಿಯರನ್ನು ತನ್ನ ಗುಲಾಮರನ್ನಾಗಿ ಮಾಡುವ ಪಕ್ಷವು ಭಯೋತ್ಪಾದಕ ಸರ್ಕಾರವಾಗಿದೆ. ಅಫ್ಘಾನಿಸ್ತಾನದಲ್ಲಿ ತಾಲಿಬಾನ್ ಇಂತಹ ಸರ್ಕಾರವನ್ನು ನಡೆಸುತ್ತಿದೆ ಎಂದು ಅವರು ಬಿಜೆಪಿ ನೇತೃತ್ವದ ಉತ್ತರಪ್ರದೇಶ ಸರ್ಕಾರದ ವಿರುದ್ಧ ಟೀಕೆ ಮಾಡುವ ವೇಳೆ ಹೇಳಿದ್ದರು.

ಕಳೆದ ಡಿಸೆಂಬರ್‌ನಲ್ಲಿ ಬಿಎಸ್ಪಿ ಮುಖ್ಯಸ್ಥೆ ಮಾಯಾವತಿ ಅವರು ಸೋದರಳಿಯ ಆನಂದ್ ಅವರನ್ನು ಉತ್ತರಾಧಿಕಾರಿಯನ್ನಾಗಿ ಘೋಷಿಸಿ ಅವರಿಗೆ ಉತ್ತರಪ್ರದೇಶ ಮತ್ತು ಉತ್ತರಾಖಂಡ ರಾಜ್ಯಗಳಲ್ಲಿ ಪಕ್ಷವನ್ನು ಬಲಪಡಿಸುವ ಜವಾಬ್ದಾರಿಯನ್ನು ನೀಡಿದ್ದರು. ಆಕಾಶ್ ಆನಂದ್ ಅವರು ಮಾಯಾವತಿಯ ಕಿರಿಯ ಸಹೋದರ ಆನಂದ್ ಕುಮಾರ್ ಅವರ ಪುತ್ರರಾಗಿದ್ದಾರೆ. ಅವರು ಬಿಎಸ್ಪಿಯಲ್ಲಿ ಬೆಹೆನ್ ಜಿ(ಮಾಯಾವತಿಯ) ನಂತರದ ಸ್ಥಾನದಲ್ಲಿದ್ದರು.

## ಭಾರತೀಯ ಯುವಕರನ್ನು ರಷ್ಯಾ ಯುದ್ಧಭೂಮಿಗೆ ತಳ್ಳಿದ ಆರೋಪ: ನಾಲ್ವರ ಬಂಧನ




■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತೀಯ ಯುವಕರನ್ನು ರಷ್ಯಾ-ಉಕ್ರೇನ್ ಯುದ್ಧ ವಲಯಕ್ಕೆ ತಳ್ಳುತ್ತಿದ್ದ ಮಾನವ ಕಳ್ಳ ಸಾಗಾಣಿಕೆ ಜಾಲದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ನಾಲ್ವರನ್ನು ಕೇಂದ್ರ ತನಿಖಾ ದಳ (ಸಿಬಿಐ) ಬಂಧಿಸಿದೆ.

ಕೇರಳದ ತಿರುವನಂತಪುರದ ಅರುಣ್, ಯೇಸುದಾಸ್ ಜೂನಿಯರ್, ಮುಂಬೈ ನಿವಾಸಿ ಆಂಥೋನಿ ಮೈಕೆಲ್ ಇಲಂಗೋವನ್ ಮತ್ತು ನಿಜಿಲ್ ಜೋಬಿ ಬೆನ್ಸಮ್ ಬಂಧಿತರು. ನಿಜಿಲ್ ಜೋಬಿ ಬೆನ್ಸಮ್ ರಷ್ಯಾದ ರಕ್ಷಣಾ ಸಚಿವಾಲಯದ ಗುತ್ತಿಗೆ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದ. ಈತ ಮಾನವ ಕಳ್ಳ ಸಾಗಣಿಕೆ ಜಾಲದ ರಷ್ಯಾದ ಕಿಂಗ್ ಪಿನ್ ಎನ್ನಲಾಗಿದೆ.

ಬಂಧಿತ ಮೈಕೆಲ್ ಅಂಥೋನಿ ದುಬೈನಲ್ಲಿ ನೆಲೆಸಿರುವ ಫೈಸಲ್ ಬಾಬಾ ಜೊತೆಗೂಡಿ ಯುವಕರು ರಷ್ಯಾಗೆ ಪ್ರಯಾಣಿಸಲು ವೀಸಾ ಪ್ರಕ್ರಿಯೆ ಮತ್ತು ವಿಮಾನ ಟಿಕೆಟ್ ಕಾಯ್ದಿರಿಸಲು ಅನುಕೂಲ ಮಾಡುತ್ತಿದ್ದ ಎಂದು ಸಿಬಿಐ ತಿಳಿಸಿದೆ.

ಇನ್ನಿಬ್ಬರು ಆರೋಪಿಗಳಾದ ಅರುಣ್ ಮತ್ತು ಯೇಸುದಾಸ್ ಜೂನಿಯರ್ ಕೇರಳ ಮತ್ತು ತಮಿಳುನಾಡಿನ ಯುವಕರನ್ನು ರಷ್ಯಾ ಸೈನ್ಯಕ್ಕೆ ಕಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದರು ಎಂದು ತಿಳಿದು ಬಂದಿದೆ.

ಆರೋಪಿಗಳು ಯೂಟ್ಯೂಬ್ ಚಾನೆಲ್ ಸೇರಿದಂತೆ ಸಾಮಾಜಿಕ ಜಾಲತಾಣ ಮೂಲಕ ಯುವಕರನ್ನು ಸಂಪರ್ಕಿಸುತ್ತಿದ್ದರು. ಬಳಿಕ ಹೆಚ್ಚು ಸಂಬಳದ ಕೆಲಸ ಆಮಿಷವೊಡ್ಡಿ ರಷ್ಯಾಗೆ ಕಳಿಸುತ್ತಿದ್ದರು ಎಂದು ಸಿಬಿಐ ಹೇಳಿದೆ.

ಕ್ರಿಮಿನಲ್ ಪಿತೂರಿ, ವಂಚನೆ ಮತ್ತು ಕಳ್ಳಸಾಗಣೆಗೆ ಸಂಬಂಧಿಸಿದ 17 ವೀಸಾ ಕನ್ಸಲ್ಟೆನ್ಸಿ ಕಂಪನಿಗಳ ಮಾಲೀಕರು ಮತ್ತು ಏಜೆಂಟರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಸಿಬಿಐ ತಿಳಿಸಿದೆ.

**ದೆಹಲಿ ಅಬಕಾರಿ ನೀತಿ ಪ್ರಕರಣ**

## ಸಿಸೋಡಿಯಾ ಜಾಮೀನು ಅರ್ಜಿಗೆ ಪ್ರತಿಕ್ರಿಯಿಸಲು ಇಡಿ-ಸಿಬಿಐಗೆ ಹೆಚ್ಚಿನ ಸಮಯ ನೀಡಿದ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪಾದಿತ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ತನಿಖಾ ಸಂಸ್ಥೆಗಳು ಸಲ್ಲಿಸಿರುವ ಭ್ರಷ್ಟಾಚಾರ ಮತ್ತು ಅಕ್ರಮ ಹಣ ವರ್ಗಾವಣೆ ಪ್ರಕರಣಗಳಲ್ಲಿ ಜಾಮೀನು ಕೋರಿ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ಮನವಿಗೆ ತಮ್ಮ ಉತ್ತರಗಳನ್ನು ಸಲ್ಲಿಸಲು ದೆಹಲಿ ಹೈಕೋರ್ಟ್ ಬುಧವಾರ ಇಡಿ ಮತ್ತು ಸಿಬಿಐಗೆ ಹೆಚ್ಚಿನ ಸಮಯವನ್ನು ನೀಡಿದೆ.

ಅರ್ಜಿಗಳಿಗೆ ತಮ್ಮ ಉತ್ತರಗಳನ್ನು ಸಲ್ಲಿಸುವಂತೆ ಕೋರಿ ಮೇ 3 ರಂದು ಎರಡು ಏಜೆನ್ಸಿಗಳಿಗೆ ನೋಟಿಸ್ ಜಾರಿ ಮಾಡಿದ್ದ ನ್ಯಾಯಮೂರ್ತಿ ಸ್ವರಣಾ ಕಾಂತ ಶರ್ಮಾ ಅವರು, ಬುಧವಾರ ವಿಚಾರಣೆಗೆ ವಿಷಯವನ್ನು ಪಟ್ಟಿ ಮಾಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ (ಇಡಿ) ಮತ್ತು ಸಿಬಿಐ ಪರ ವಕೀಲರು ತಿಳಿಸಿದ್ದಾರೆ. ಪ್ರತಿಕ್ರಿಯೆ ನೀಡಲು ಸ್ವಲ್ಪ ಸಮಯ ಬೇಕಾಗುತ್ತದೆ ಎಂದು ಮನವಿ ಮಾಡಿದರು.

ತನಿಖಾ ಸಂಸ್ಥೆಗಳ ವಕೀಲರು ಮಾಡಿದ ಮನವಿಯನ್ನು ಸಿಸೋಡಿಯಾ ಅವರ ವಕೀಲರು ವಿರೋಧಿಸಿದರು. "ತಮ್ಮ ಕಕ್ಷಿದಾರರು ಜೈಲಿನಲ್ಲಿದ್ದಾರೆ, ಆರು ತಿಂಗಳಲ್ಲಿ ವಿಚಾರಣೆಯನ್ನು ಪೂರ್ಣಗೊಳಿಸುವುದಾಗಿ ಇಡಿ ಮತ್ತು ಸಿಬಿಐ ಸುಪ್ರೀಂ ಕೋರ್ಟ್‌ಗೆ ಭರವಸೆ ನೀಡಿವೆ" ಎಂದು ಕೋರ್ಟ್ ಗಮನಕ್ಕೆ ತಂದರು.

ಹೈಕೋರ್ಟ್ ತನ್ನ ಆದೇಶ ನೀಡಿದ್ದು, "ಪ್ರತಿವಾದಿಗಳು ಉತ್ತರವನ್ನು ಸಲ್ಲಿಸಲು ಹೆಚ್ಚಿನ ಸಮಯವನ್ನು ಬಯಸುತ್ತಾರೆ. ಪ್ರಕರಣದ ಸಹ ಆರೋಪಿಗೆ ಸಂಬಂಧಿಸಿದಂತೆ ಮತ್ತೊಂದು ಪ್ರಾಸಿಕ್ಯೂಷನ್ ದೂರನ್ನು ದಾಖಲಿಸುವ ಪ್ರಕ್ರಿಯೆಯಲ್ಲಿ ಇಡಿ ಇದೆ" ಎಂದು ಹೇಳಲಾಗಿದೆ.

ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಮಾಹಿತಿ

# ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಶೇ.77.60 ಮತದಾನ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಮೇ.7ರಂದು ನಡೆದ ಹಾವೇರಿ ಲೋಕಸಭಾ ಕ್ಷೇತ್ರದ ಚುನಾಚಣೆಯಲ್ಲಿ ಅಂತಿಮವಾಗಿ ಶೇ.77.60ರಷ್ಟು ಮತದಾನವಾಗಿದೆ. ಮತ ಎಣಿಕೆ ಕಾರ್ಯ ಜೂನ್ 4ರಂದು ದೇವಗಿರಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಜರುಗಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 9,02,119 ಪುರುಷರು, 8,90,572 ಮಹಿಳೆಯರು ಹಾಗೂ 83 ಇತರರು ಸೇರಿದಂತೆ ಒಟ್ಟಾರೆ 17,92,774 ಮತದಾರ ಪೈಕಿ 7,13,613 ಪುರುಷರು, 6,77,577 ಮಹಿಳೆಯರು ಹಾಗೂ 24 ಜನ ಇತರರು ಸೇರಿ 13,91,214 ಮತದಾರರು ಮತ ಚಲಾಯಿಸಿದ್ದಾರೆ.



ಶಿರಹಟ್ಟಿ ಕ್ಷೇತ್ರದಲ್ಲಿ 84,753 ಪುರುಷರು, 81,276 ಮಹಿಳೆಯರು ಹಾಗೂ ಇತರೆ ಇಬ್ಬರು ಸೇರಿ 1,66,031 ಮತದಾರರು, ಗದಗ ಕ್ಷೇತ್ರದಲ್ಲಿ 85,697 ಪುರುಷರು, 84,890 ಮಹಿಳೆಯರು ಹಾಗೂ ಇತರೆ ನಾಲ್ಕು ಜನ ಸೇರಿ 1,70,591 ಮತದಾರರು, ರೋಣ ಕ್ಷೇತ್ರದಲ್ಲಿ 88,625 ಪುರುಷರು, 86,319 ಮಹಿಳೆಯರು ಹಾಗೂ ನಾಲ್ಕು ಜನ ಸೇರಿ 1,74,948 ಮತದಾರರು, ಹಾನಗಲ್ ಕ್ಷೇತ್ರದಲ್ಲಿ 91,945 ಪುರುಷರು, 85,852 ಮಹಿಳೆಯರು ಹಾಗೂ ಇತರೆ ಇಬ್ಬರು ಸೇರಿ 1,77,799 ಮತದಾರರು, ಹಾವೇರಿ ಕ್ಷೇತ್ರದಲ್ಲಿ 95,437 ಪುರುಷರು, 88,812 ಮಹಿಳೆಯರು ಹಾಗೂ ಇತರೆ ಏಳು ಜನ ಸೇರಿ 1,84,256 ಮತದಾರರು, ಬ್ಯಾಡಗಿ ಕ್ಷೇತ್ರದಲ್ಲಿ 90,080 ಪುರುಷರು, 84,264 ಮಹಿಳೆಯರು ಹಾಗೂ ಇತರೆ ಇಬ್ಬರು ಸೇರಿ 1,74,346 ಮತದಾರರು, ಹಿರೇಕೆರೂರು ಕ್ಷೇತ್ರದಲ್ಲಿ 80,299 ಪುರುಷರು, 75,218 ಮಹಿಳೆಯರು ಹಾಗೂ ಇತರೆ ಇಬ್ಬರು ಸೇರಿ 1,55,519 ಮತದಾರರು ಹಾಗೂ ರಾಣೇಬೆನ್ನೂರು ಕ್ಷೇತ್ರದಲ್ಲಿ 96,777 ಪುರುಷರು, 90,946 ಮಹಿಳೆಯರು ಹಾಗೂ ಇತರೆ ಒಬ್ಬರು ಸೇರಿ 11,87,724 ಮತದಾರರು ಮತ ಚಲಾಯಿಸಿದ್ದಾರೆ.

ಶಿರಹಟ್ಟಿ ಕ್ಷೇತ್ರದಲ್ಲಿ ಶೇ.72.19, ಗದಗ ಕ್ಷೇತ್ರದಲ್ಲಿ ಶೇ.74.30, ರೋಣ ಕ್ಷೇತ್ರದಲ್ಲಿ ಶೇ.73.16, ಹಾನಗಲ್ ಕ್ಷೇತ್ರದಲ್ಲಿ ಶೇ.82.38, ಹಾವೇರಿ ಕ್ಷೇತ್ರದಲ್ಲಿ ಶೇ.77.29, ಬ್ಯಾಡಗಿ ಕ್ಷೇತ್ರದಲ್ಲಿ ಶೇ.82.02, ಹಿರೇಕೆರೂರು ಕ್ಷೇತ್ರದಲ್ಲಿ ಶೇ.82.63 ಹಾಗೂ ರಾಣೇಬೆನ್ನೂರು ಕ್ಷೇತ್ರದಲ್ಲಿ ಶೇ.78.53ರಷ್ಟು ಮತದಾನವಾಗಿದೆ. ಎಂಟು ವಿಧಾನಸಭಾ ಕ್ಷೇತ್ರಗಳ ಪೈಕಿ ಹಿರೇಕೆರೂರು ಕ್ಷೇತ್ರದಲ್ಲಿ ಶೇ.82.68ರಷ್ಟು ಹೆಚ್ಚು ಮತದಾನವಾದರೆ, ಶಿರಹಟ್ಟಿ ಕ್ಷೇತ್ರದಲ್ಲಿ ಅತ್ಯಂತ ಕಡಿಮೆ ಶೇ.72.19ರಷ್ಟು ಮತದಾನ ದಾಖಲಾಗಿದೆ. ಕಳೆದ 2019ರ ಹಾವೇರಿ ಲೋಕಸಭಾ ಚುನಾವಣೆಯಲ್ಲಿ ಶೇ.74.01ರಷ್ಟು ಮತದಾನವಾಗಿತ್ತು. ಈ ಬಾರಿ ಶೇ.77.60ರಷ್ಟು ಮತದಾನವಾಗಿದ್ದು, ಶೇ.3.59ರಷ್ಟು ಅಧಿಕ ಮತದಾನವಾಗಿದೆ.

### ಜಿಲ್ಲೆಯಲ್ಲಿ ಶೇ.79.82 ಮತದಾನ

ಲೋಕಸಭಾ ಚುನಾಚಣೆಯಲ್ಲಿ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಲ್ಲಿ ಶೇ.79.82 ರಷ್ಟು ಮತದಾನವಾಗಿದೆ. ಹಾನಗಲ್ ಕ್ಷೇತ್ರದಲ್ಲಿ ಶೇ.82.36, ಶಿಗ್ಗಾಂವ ಕ್ಷೇತ್ರದಲ್ಲಿ ಶೇ.77.24, ಹಾವೇರಿ ಕ್ಷೇತ್ರದಲ್ಲಿ ಶೇ.77.24, ಬ್ಯಾಡಗಿ ಕ್ಷೇತ್ರದಲ್ಲಿ ಶೇ.81.98, ಹಿರೇಕೆರೂರು ಕ್ಷೇತ್ರದಲ್ಲಿ ಶೇ.82.62 ಹಾಗೂ ರಾಣೇಬೆನ್ನೂರು ಕ್ಷೇತ್ರದಲ್ಲಿ ಶೇ.78.5 ರಷ್ಟು ಮತದಾನವಾಗಿದೆ. ಜಿಲ್ಲೆಯಲ್ಲಿ ಕಳೆದ 2019ರ ಚುನಾವಣೆಯಲ್ಲಿ 75.5 ರಷ್ಟು ಮತದಾನವಾಗಿತ್ತು. ಈ ಬಾರಿ ಶೇ.4.32ರಷ್ಟು ಅಧಿಕ ಮತದಾನವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

## 'ಶರಣರ ಶಕ್ತಿ' ಚಿತ್ರದ ಹಾಡುಗಳ ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

12ನೇ ಶತಮಾನದಲ್ಲಿ ಶರಣರು, ಅನುಭವ ಮಂಟಪ ಮತ್ತು ಬಸವಣ್ಣ ಎನ್ನುವುದು ಆಕರ್ಷಣೀಯವಾಗಿದ್ದವು. ಈ ಬಗ್ಗೆ ಸಾಕಷ್ಟು ಸಂಶೋಧನೆ ನಡೆಸಿ 'ಶರಣರ ಶಕ್ತಿ' ಹೆಸರಿನ ಚಿತ್ರ ಸಿದ್ಧವಾಗುತ್ತಿದ್ದು, ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ ನಿರತವಾಗಿದೆ. ಪ್ರಚಾರದ ಮೊದಲ ಹಂತವಾಗಿ ಬಸವ ಜಯಂತಿಯ ಮುನ್ನಾದಿನ ರೇಣುಕಾಂಬಾ ಸ್ಟುಡಿಯೋದಲ್ಲಿ ಹಾಡು ಬಿಡುಗಡೆ ಕಾರ್ಯಕ್ರಮ ನಡೆಯಿತು.

ಶ್ರೀಷ ಫಿಲಂಸ್ ಅಡಿಯಲ್ಲಿ ಆರಾಧನಾ ಕುಲಕರ್ಣಿ ಬಂಡವಾಳ ಹೂಡುವ ಜತೆಗೆ ಅಕ್ಕ ನಾಗಮ್ಮನ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ನಿರ್ದೇಶಕ ಮಹೇಶ್‌ಬಾಬು ಅವರಲ್ಲಿ ಕೆಲಸ ಕಲಿತುಕೊಂಡಿರುವ ದಿಲೀಪ್ ಶರ್ಮ ಸಿನಿಮಾಕ್ಕೆ ರಚನೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಮಾಡಿದ್ದಾರೆ.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಹಿರಿಯ ಸಾಹಿತಿ, ಜಾನಪದ ವಿದ್ವಾಂಸ, ಅನುಭವ ಮಂಟಪದ ಅಧ್ಯಕ್ಷ ಗೊ.ರು. ಚನ್ನಬಸಪ್ಪ ಮಾತನಾಡಿ, ಬಸವಣ್ಣ ಇಂದಿಗೂ ಯಾಕೆ ಪ್ರಸ್ತುತ ಎಂಬುದನ್ನು ಇದರಲ್ಲಿ ನಿರೂಪಣೆ ಮಾಡಿದ್ದಾರೆಂಬುದು ತಿಳಿದು ಬಂದಿದೆ.


ಬಸವಣ್ಣನವರು ಸಾರ್ವಕಾಲಿಕವಾದವರು. ಸರ್ಕಾರವು ನೂತನ ಅನುಭವ ಮಂಟಪಕ್ಕೆ ಹಣ ಮಂಜೂರು ಮಾಡಿದೆ. ಕೆಲಸಗಳು ಸದ್ಯದಲ್ಲೇ ಶುರುವಾಗಲಿದೆ. ಚಿತ್ರವು ಎಲ್ಲರನ್ನೂ ತಲುಪಲಿ ಎಂದರು.

ಬಸವಣ್ಣನಾಗಿ ಮಂಜುನಾಥ ಗೌಡ ಪಾಟೀಲ್, ನೀಲಾಂಬಿಕೆಯಾಗಿ ಸಂಗೀತ ಮಡ್ಲೂರು, ಶೀಲವಂತನಾಗಿ ವಿಶ್ವರಾಜ್ ರಾಜ್‌ಗುರು, ಚನ್ನಬಸವಣ್ಣನಾಗಿ ಧ್ರುವ ಶರ್ಮ, ಉಳಿದಂತೆ ರಮೇಶ್ ಪಂಡಿತ್, ಸಾಚಿ ಜೈನ್, ವಿನೋದ್ ದಂಡಿನ, ರಾಮಕೃಷ್ಣ ದೊಡ್ಡಮನಿ, ಅಬ್ದುಲ್ ಲತೀಫ್ ಹಾಗೂ 140 ರಂಗಭೂಮಿ ಕಲಾವಿದರುಗಳಿಗೆ ಅವಕಾಶ ಮಾಡಿಕೊಡಲಾಗಿದೆ.

ಸಂಗೀತ ವಿನು ಮನಸು, ಛಾಯಾಗ್ರಹಣ ಮುಂಜಾನೆ ಮಂಜು, ಸಂಕಲನ ಮಹಾಂತೇಶ್. ಆರ್ ನಿರ್ವಹಿಸಿದ್ದಾರೆ. ಋಷಿಕುಮಾರ ಸ್ವಾಮೀಜಿ, ಮುನಿವೆಂಕಟಪ್ಪ ಸುಂದರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಗದಗ: ಮೇ 7ರಂದು ಜರುಗಿದ ಲೋಕಸಭೆ ಚುನಾವಣೆ 2024ರ 2ನೇ ಹಂತದ ಮತದಾನದಲ್ಲಿ ನರಸಾಪುರ ನೇಕಾರ ಕಾಲನಿಯ ಕನ್ನಡ ಶಾಲೆಯಲ್ಲಿರುವ ಮತಗಟ್ಟೆಯಲ್ಲಿ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಮೀನುಗಾರಿಕೆ ಅಧ್ಯಕ್ಷ ಸಂಗಮೇಶ ಹಾದಿಮನಿಯವರು ಕುಟುಂಬ ಸಮೇತ ಆಗಮಿಸಿ ಮತ ಚಲಾಯಿಸಿದರು.



ಗದಗ: ಸಾರ್ವತ್ರಿಕ ಚುನಾವಣೆ-2024ರ ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದಲ್ಲಿ ಮೇ.7ರಂದು ನಡೆದ ಮತದಾನದಲ್ಲಿ ನಗರದ ಡಾ. ವಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದ ಅಧ್ಯಕ್ಷೆ ಡಾ. ವಿ.ವಿ. ಹಿರೇಮಠ ಹಾಗೂ ಉಪಾಧ್ಯಕ್ಷ ಪುಟ್ಟರಾಜಸ್ವಾಮಿ ವಿ.ಹಿರೇಮಠ ಮತದಾನ ಮಾಡಿದರು.

## ಮಕ್ಕಳಿಗೆ ಹಲ್ಲುಗಳ ಆರೋಗ್ಯ ಸಲಹೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ಬೇಸಿಗೆ ಶಿಬಿರದ ಮಕ್ಕಳಿಗೆ ಗದುಗಿನ ಅಳ್ಳೊಳ್ಳಿ ಚಿಕ್ಕಮಕ್ಕಳ ದಂತ ಚಿಕಿತ್ಸಾಲಯದ ಖ್ಯಾತ ವೈದ್ಯ ಡಾ. ರೋಹಿತ್ ಕೊಪ್ಪಳಕರ್ ಆರೋಗ್ಯ ಸಲಹೆ ನೀಡಿದರು.



ಡಾ. ರೋಹಿತ್ ಕೊಪ್ಪಳಕರ್ ಮಕ್ಕಳನ್ನು ಉದ್ದೇಶಿಸಿ ಮಾತನಾಡಿ, ಪ್ರತಿಯೊಬ್ಬರೂ ಪ್ರತ್ಯೇಕ ಬ್ರಷ್‌ನಲ್ಲಿ ಹಲ್ಲುಜ್ಜುವ ಅಭ್ಯಾಸ ಇಟ್ಟುಕೊಳ್ಳಬೇಕು. ಯಾವುದೇ ಆಹಾರ-ಪದಾರ್ಥ ಸೇವಿಸಿದ ನಂತರ ನೀರಿನಲ್ಲಿ ಬಾಯಿ ಮುಕ್ಕಳಿಸಬೇಕು. ಹಲ್ಲುಜ್ಜುವಾಗ ವಸಡಿನಲ್ಲಿ ರಕ್ತಸ್ರಾವವಾಗುತ್ತಿದ್ದರೆ ವೈದ್ಯರ ಸಲಹೆ ಪಡೆದುಕೊಳ್ಳಬೇಕು. ಪ್ರತಿನಿತ್ಯ ಬೆಳಿಗ್ಗೆ ಮತ್ತು ರಾತ್ರಿ ತಪ್ಪದೇ ಬ್ರಷ್ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಹಲ್ಲಿನ ಮಾದರಿ ತೋರಿಸಿ, ಪ್ರಾಯೋಗಿಕವಾಗಿ ಹಲ್ಲು ಉಜ್ಜುವ ಪದ್ಧತಿಯನ್ನು ತಿಳಿಸಿಕೊಟ್ಟರು. ಹಲ್ಲುಗಳ ಸ್ವಚ್ಛತೆ ಕಾಪಾಡಿಕೊಳ್ಳುವ ಜೊತೆಗೆ ಸೊಪ್ಪು, ತರಕಾರಿ, ಹಣ್ಣು, ರಾಗಿ ಮುದ್ದೆಯಂತಹ ಖನಿಜಯುಕ್ತ ಆಹಾರ ಸೇವಿಸುವುದರಿಂದ ಹಲ್ಲುಗಳ ರಕ್ಷಣೆ ಆಗುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಈ ಕಾರ್ಯಗಾರದಲ್ಲಿ ಸಂಸ್ಥೆಯ ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್.ಹುಯಿಲಗೋಳ, ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ, ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಗದಗ: ಮೇ.7ರಂದು ನಡೆದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಹಾವೇರಿ ಲೋಕಸಭಾ ಮತಕ್ಷೇತ್ರದ ಮತದಾನದಲ್ಲಿ ಕಾಂಗ್ರೆಸ್ ಮುಖಂಡ ಗಿರೀಶ, ಡಾ. ಅನಿತಾ ಅಂಗಡಿ ದಂಪತಿಗಳು ನಗರದ ರಾಜೀವಗಾಂಧಿ ಸರಕಾರಿ ಹೆಣ್ಣು ಮಕ್ಕಳ ವಸತಿ ನಿಲಯದ ಬೂತ್ ಸಂಖ್ಯೆ 199ರಲ್ಲಿ ತಮ್ಮ ಮತದಾನ ಮಾಡಿದರು.




ರೋಣ: ತಾಲೂಕಿನ ಮತಗಟ್ಟೆಗೆ ಅಧ್ಯಕ್ಷಾಧಿಕಾರಿಯಾಗಿ ನೇಮಕಗೊಂಡ ಗದಗ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸದಸ್ಯ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಡಾ. ಕಿಶೋರಬಾಬು ಜೆ.ನಾಗರಕಟ್ಟಿಯವರು ಲೋಕಸಭಾ ಚುಮಾವಣೆಯಲ್ಲಿ ಇ.ಡಿ.ಸಿ. ಮುಖಾಂತರ ತಮ್ಮ ಮತ ಚಲಾಯಿಸಿದರು.

## ಹರೀಶ ಪೂಜಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮುಳಗುಂದ ನಾಕಾದಲ್ಲಿನ ಶ್ರೀ ವಿಠ್ಠಲಾರೂಢ ಸಭಾಭವನದಲ್ಲಿ ನಡೆದ ಗದಗ-ಬೆಟಗೇರಿ ಎಸ್.ಎಸ್.ಕೆ. ಸಮಾಜದ ಸಭೆಯಲ್ಲಿ ಹಿಂದುಳಿದ ಸಮುದಾಯದ ಮುಖಂಡ, ಬಿಜೆಪಿ ನಾಯಕ ಹಾಗೂ ಗೊಲ್ಲ (ಯಾದವ) ಸಮಾಜದ ಜಿಲ್ಲಾ ಅಧ್ಯಕ್ಷ ಹರೀಶ ಪೂಜಾರರು, ಸಚಿವ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.



ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಾಬರ್ಚಿ, ಕಾಂಗ್ರೆಸ್ ಪಕ್ಷದ ಮುಖಂಡ ಪ್ರಭು ಬುರಬುರೆ, ಬ್ಲಾಕ್ ಕಾಂಗ್ರೆಸ್ ಶಹರ ಘಟಕದ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್‌ಎಸ್‌ಕೆ ಸಮಾಜದ ಅಧ್ಯಕ್ಷರಾದ ಫಕೀರಸಾ ಭಾಂಡಗೆ, ಬುಡ್ಡಣ್ಣ ಹಬೀಬ್, ವಿನೋದ್ ಸಿದ್ಲಿಂಗ, ಪ್ರಕಾಶ್ ಖೋಡೆ, ವೆಂಕಟೇಶ್ ಪೂಜಾರ್, ಮೋಹನ್ ಪವಾರ್, ಸಮಾಜದ ಹಿರಿಯರು, ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಐಐಐಟಿ ನಿರ್ದೇಶಕರಾಗಿ ಪ್ರೊ.ಮಹಾದೇವ ಪ್ರಸನ್ನ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಧಾರವಾಡದ ಐಐಐಟಿ ನೂತನ ನಿರ್ದೇಶಕರಾಗಿ ಪ್ರೊ. ಎಸ್.ಆರ್. ಮಹಾದೇವ ಪ್ರಸನ್ನ ನೇಮಕಗೊಂಡಿದ್ದಾರೆ.

ಇವರು 2023ರಲ್ಲಿ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಉತ್ತಮ ಶಿಕ್ಷಕರ ರಾಷ್ಟ್ರೀಯ ಪ್ರಶಸ್ತಿ ಪಡೆದಿದ್ದಾರೆ. ಈ ಹಿಂದೆ ಅವರು ಐಐಟಿ ಧಾರವಾಡದಲ್ಲಿ ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ (EECE) ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಮತ್ತು ಡೀನ್ (Faculty Welfare) ಹಾಗೂ ಗುವಾಹಟಿಯ ಐಐಟಿಯ ಡೀನ್ (ಸಂಶೋಧನೆ ಮತ್ತು ಅಭಿವೃದ್ಧಿ) ಆಗಿದ್ದರು. ಅವರು 2004ರಲ್ಲಿ ಐಐಟಿ ಮದ್ರಾಸ್‌ನಿಂದ ಪಿಎಚ್‌ಡಿ ಪಡೆದಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಪಕ್ಷಕ್ಕಾಗಿ ಶ್ರಮಿಸಿದವರಿಗೆ ಕೃತಜ್ಞತೆ

■ ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜನತಾ ಪಾರ್ಟಿ ಹಾವೇರಿ-ಗದಗ ಲೋಕಸಭಾ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರವಾಗಿ ಚುನಾವಣಾ ಕಾರ್ಯ ಚಟುವಟಿಕೆಯಲ್ಲಿ ತೊಡಗಿ ಮನೆ, ಮನೆ ಸಂಪರ್ಕ ಮಾಡಿ, ಕೇಂದ್ರ ಸರ್ಕಾರದ ಹತ್ತಾರು ಯೋಜನೆಗಳು ಹಾಗೂ ಜನಪರ ಕಾಳಜಿಗಳ ಬಗ್ಗೆ ಮತದಾರರಿಗೆ ತಿಳಿಸಿ, ಪಕ್ಷದ ಬಲವರ್ಧನೆಗೆ ಶ್ರಮಿಸಿದ ಎಲ್ಲ ಮುಖಂಡರು, ಕಾರ್ಯಕರ್ತರು, ಹಿತೈಷಿಗಳು, ಅಭಿಮಾನಿಗಳು ಹಾಗೂ ಜಿಲ್ಲೆಯ ಎಲ್ಲ ಪದಾಧಿಕಾರಿಗಳಿಗೆ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಪತ್ರಿಕಾ ಪ್ರಕಟಣೆಯ ಮೂಲಕ ಕೃತಜ್ಞತೆ ತಿಳಿಸಿದ್ದಾರೆ.

## ಪ್ರಜ್ವಲ್-ರೇವಣ್ಣ ಲೈಂಗಿಕ ಪ್ರಕರಣ | ಅಧಿಕಾರಿಗಳನ್ನು ಕುಮಾರಸ್ವಾಮಿ ಹೆದರಿಸುತ್ತಿದ್ದಾರೆ: ಡಿಕೆ ಶಿವಕುಮಾರ್ ಆರೋಪ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಎಲ್ಲ ಅಧಿಕಾರಿಗಳಿಗೂ ಹೆದರಿಸುವ ಕೆಲಸವನ್ನು ಎಚ್‌ಡಿಕೆ ಮಾಡುತ್ತಿದ್ದಾರೆ. ಅವರು ಒಂದು ರೀತಿಯಲ್ಲಿ ಕಿಂಗ್ ಆಫ್ ಬ್ಲ್ಯಾಕ್ ಮೇಲ್ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹರಿಹಾಯ್ದರು.

ಚಿಕ್ಕಮಗಳೂರಿನ ಹೆಲಿಪ್ಯಾಡ್‌ನಲ್ಲಿ ಮಾತನಾಡಿದ ಅವರು, "ಕುಮಾರಸ್ವಾಮಿ ತೀರ್ಪು ಹೇಳೋಕೆ ಏನು ಲಾಯರಾ? ಜಡ್ಜಾ? ಕುಮಾರಸ್ವಾಮಿಗೆ ನನ್ನ ರಾಜೀನಾಮೆ ಬೇಕಂತೆ, ಕೊಡೋಣ. ಅವರು ನನ್ನ ವಿರುದ್ಧ ಆರೋಪ ಮಾಡುತ್ತಿದ್ದಾರೆ, ಮಾಡಲಿ, ನನ್ನ ಹೆಸರು ಹೇಳದಿದ್ದರೆ ಅವರ ಮಾರ್ಕೆಟ್ ಓಡಲ್ಲ" ಎಂದರು.

## ಮಾಧ್ಯಮಗಳ ಮೇಲೆ ಸೆನ್ಸಾರ್‌ಶಿಪ್ ಹೇರಲು ಸಾಧ್ಯವಿಲ್ಲ; ಅರ್ಜಿದಾರರಿಗೆ ದಂಡ ವಿಧಿಸಿದ ದೆಹಲಿ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಬಂಧನ ಅಥವಾ ಅವರ ರಾಜೀನಾಮೆ ಕುರಿತ ಊಹಾಪೋಹದ ಕುರಿತು ಸಂವೇದನಾಶೀಲ ಶೀರ್ಷಿಕೆಗಳನ್ನು ಪ್ರಸಾರ ಮಾಡದಂತೆ ಸುದ್ದಿ ವಾಹಿನಿಗಳನ್ನು ನಿರ್ಬಂಧಿಸಲು ಕೋರಿದ್ದ ಅರ್ಜಿದಾರರಿಗೆ 1 ಲಕ್ಷ ದಂಡ ವಿಧಿಸಿದ ದೆಹಲಿ ಹೈಕೋರ್ಟ್, ಮಾಧ್ಯಮಗಳನ್ನು ಸೆನ್ಸಾರ್ ಮಾಡುವ ಅಥವಾ ವಾಕ್ ಸ್ವಾತಂತ್ರ್ಯದ ಮೇಲೆ ವಿವೇಚನಾರಹಿತ ನಿರ್ಬಂಧಗಳನ್ನು ಹಾಕುವ ಪ್ರಯತ್ನಗಳನ್ನು ನಿರಾಕರಿಸಿದೆ.




"ನ್ಯಾಯಾಲಯಗಳು ಆರ್ಟಿಕಲ್ 226 (ರಿಟ್ ನ್ಯಾಯವ್ಯಾಪ್ತಿ) ಅಡಿಯಲ್ಲಿ ಸೆನ್ಸಾರ್ಶಿಪ್ ಅನ್ನು ವಿಧಿಸುತ್ತವೆ ಎಂದು ನೀವು ಭಾವಿಸುತ್ತೀರಾ? ನೀವು ಪತ್ರಿಕಾ ಮಾಧ್ಯಮದ ವಿರುದ್ಧ ಗ್ಯಾಗ್ ಆರ್ಡರ್ ಕೇಳುತ್ತಿದ್ದೀರಾ? ನಾವು ಏನು ಮಾಡುವುದು? ನಾವು ತುರ್ತು ಪರಿಸ್ಥಿತಿಯನ್ನು ಹೇರುತ್ತೇವೆಯೇ? ಸೆನ್ಸಾರ್ಶಿಪ್? ಮಾರ್ಷಲ್ ಲಾ" ಎಂದು ಅರ್ಜಿದಾರರಾಗಿ ಹಾಜರಿದ್ದ ವಕೀಲ ಶ್ರೀಕಾಂತ್ ಪ್ರಸಾದ್ ಅವರನ್ನು ಉದ್ದೇಶಿಸಿ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಮನಮೋಹನ್ ಟೀಕಿಸಿದರು.

ಪ್ರಸಾದ್ ಅವರು ಕೇಜ್ರಿವಾಲ್ ವಿರುದ್ಧ ಭಾರತೀಯ ಜನತಾ ಪಕ್ಷದ ದೆಹಲಿ ಮುಖ್ಯಸ್ಥ ವೀರೇಂದ್ರ ಸಚ್‌ದೇವ ನೇತೃತ್ವದ ಮಾಧ್ಯಮ ಪ್ರಸಾರ ಮತ್ತು ಸಂಘಟಿತ ರಾಜಕೀಯ ಪ್ರತಿಭಟನೆಗಳು ಮೂಲಭೂತ ಹಕ್ಕುಗಳ ತೀವ್ರ ಉಲ್ಲಂಘನೆಯಾಗಿದೆ ಎಂದು ವಾದಿಸಿದರು. ರಾಜಕೀಯ ಪ್ರತಿಭಟನೆಗಳು ಅಥವಾ ಹೇಳಿಕೆಗಳ ಮೂಲಕ ರಾಜೀನಾಮೆ ನೀಡುವಂತೆ ಕೇಜ್ರಿವಾಲ್ ಮೇಲೆ ಸಚ್‌ದೇವ ಅನಗತ್ಯ ಒತ್ತಡ ಹೇರುವುದನ್ನು ತಡೆಯಲು ಅವರು ಪ್ರಯತ್ನಿಸಿದರು. ಹೆಚ್ಚುವರಿ ಸಾಲಿಸಿಟರ್ ಜನರಲ್ ಚೇತನ್ ಶರ್ಮಾ ಅವರು ಪ್ರತಿನಿಧಿಸಿದ ಕೇಂದ್ರವು, ಪ್ರಸಾದ್ ಅವರು ಖಾಯಂ ಜಾರ್ಖಂಡ್ ನಿವಾಸಿಯಾಗಿರುವುದರಿಂದ ದುರುದ್ದೇಶದಿಂದ ಅರ್ಜಿ ಸಲ್ಲಿಸಿದ್ದಾರೆ ಎಂದರು.

ನ್ಯಾಯಮೂರ್ತಿಗಳಾದ ಮನಮೋಹನ್ ಮತ್ತು ಮನ್ಮೀತ್ ಪಿಎಸ್ ಅರೋರಾ ಅವರ ಪೀಠವು ರಾಜಕೀಯ ಪ್ರತಿಸ್ಪರ್ಧಿಗಳನ್ನು ರ್‍ಯಾಲಿಗಳನ್ನು ನಡೆಸುವುದನ್ನು ನಿಲ್ಲಿಸುವುದು ಅಥವಾ ಕೇಜ್ರಿವಾಲ್ ರಾಜೀನಾಮೆಗೆ ಒತ್ತಾಯಿಸುವ ಹೇಳಿಕೆಗಳನ್ನು ನೀಡುವಂತಹ ತುರ್ತು ಕ್ರಮಗಳನ್ನು ಜಾರಿಗೊಳಿಸಲು ನ್ಯಾಯಾಲಯಕ್ಕೆ ಸಾಧ್ಯವಿಲ್ಲ ಎಂದು ಹೇಳಿದೆ. ವೀಡಿಯೋ ಕಾನ್ಫರೆನ್ಸಿಂಗ್ ಮೂಲಕ ಕೇಜ್ರಿವಾಲ್ ಜೈಲಿನಿಂದ ಆಡಳಿತ ನಡೆಸಲು ಅವಕಾಶ ನೀಡಬೇಕೆಂಬ ಪ್ರಸಾದ್ ಅವರ ಮನವಿಯನ್ನೂ ಅದು ತಿರಸ್ಕರಿಸಿದೆ.

ತಮ್ಮ ಬಂಧನದ ವಿರುದ್ಧ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ ಎಂದು ಪೀಠವು ಗಮನಿಸಿದೆ. ಮಾಧ್ಯಮಗಳು ತಮ್ಮ ಅಭಿಪ್ರಾಯಗಳನ್ನು ತಡೆಹಿಡಿಯುವಂತೆ ನಿರ್ದೇಶಿಸಲು ಸಾಧ್ಯವಿಲ್ಲ ಅಥವಾ ತುರ್ತು ಪರಿಸ್ಥಿತಿ ಅಥವಾ ಸಮರ ಕಾನೂನನ್ನು ಘೋಷಿಸುವ ರೀತಿಯ ಕ್ರಮಗಳನ್ನು ಕೈಗೊಳ್ಳಲು ಸಾಧ್ಯವಿಲ್ಲ ಎಂದು ಅದು ಹೈಲೈಟ್ ಮಾಡಿದೆ.



ಗದಗ: ಮೇ.7ರಂದು ನಡೆದ ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಹಾವೇರಿ ಲೋಕಸಭಾ ಮತಕ್ಷೇತ್ರದ ಮತದಾನದಲ್ಲಿ ವರ್ತಕರಾದ ಪ್ರಮೋದ, ಶ್ವೇತಾ ವಾರಕರ ದಂಪತಿಗಳು ನಗರದ ವಾರ್ಡ್ ನಂ. 27ರ ಎ.ಪಿ.ಎಂ.ಸಿ. ಬೂತ್ ನಂ. 102ರಲ್ಲಿ ತಮ್ಮ ಮತದಾನದ ಹಕ್ಕು ಚಲಾಯಿಸಿದರು.

# ಶ್ರೀ ದುರ್ಗಾದೇವಿ ಜಾತ್ರಾ ಮಹೋತ್ಸವ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಮೂರು ವರ್ಷಕ್ಕೊಮ್ಮೆ ನಡೆಯುವ ಶ್ರೀ ದುರ್ಗಾದೇವಿ ಜಾತ್ರೆಯು ಮೇ.9ರಂದು ಜರುಗಲಿದೆ. ಬೆಳಿಗ್ಗೆ ದುರ್ಗಾದೇವಿ ಪೂಜಾರಿಗಳಿಂದ ಅಗ್ನಿ ಕುಂಡದಲ್ಲಿ ಪ್ರವೇಶ ಕಾರ್ಯಕ್ರಮ ನಡೆಯಲಿದೆ.

ಅಗ್ನಿ ಕುಂಡದಲ್ಲಿ ಪ್ರವೇಶ ಹಾಗೂ ರಥೋತ್ಸವ ಕಾರ್ಯಕ್ರಮದ ಪ್ರಯುಕ್ತ ದೇವಿಗೆ ವಿಶೇಷ ಜಲಾಭಿಷೇಕ ಹಾಗೂ ಚಿನ್ನ-ಬೆಳ್ಳಿ ಆಭರಣಗಳಿಂದ ಅಲಂಕಾರ ಮಾಡಿ ಗಂಗಾ ಪೂಜೆ ಸಲ್ಲಿಸಿ ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ಮಂಗಳ ವಾದ್ಯಗಳ ಮೂಲಕ ಮೆರವಣಿಗೆ ಸಂಚರಿಸಿ, ಅಗ್ನಿ ಕುಂಡದಲ್ಲಿ ಪ್ರವೇಶ ಮಾಡುವುದರ ಮೂಲಕ ಸಂಭ್ರಮದಿಂದ ಆಚರಿಸಲಾಗುತ್ತದೆ.

ಮಧ್ಯಾಹ್ನ ಸರ್ವ ಧರ್ಮ ಸಾಮೂಹಿಕ ವಿವಾಹ ನಡೆಯಲಿದ್ದು, ಸಾಯಂಕಾಲ ದೇವಿಯ ಮಹಾ ರಥೋತ್ಸವ ನೆರವೇರಲಿದೆ ಎಂದು ಟ್ರಸ್ಟ್ ಕಮಿಟಿಯ ಪ್ರಕಟಣೆ ತಿಳಿಸಿದೆ.

# ಪೆನ್‌ಡ್ರೈವ್ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಹಾಸನದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರರ ಪಾತ್ರ ನೇರವಾಗಿ ಇರುವದಾಗಿ ಬಿಜೆಪಿಯ ಮುಖಂಡ ದೇವರಾಜೇಗೌಡ ಸಾಕ್ಷಿ ಸಮೇತ ಸುದ್ದಿ ಮಾಧ್ಯಮದಲ್ಲಿ ಆಪಾದಿಸಿದ್ದು, ಈ ಕೂಡಲೇ ರಾಜ್ಯಪಾಲರು ಹಾಗೂ ಪ್ರಧಾನಮಂತ್ರಿಗಳು ಮಧ್ಯಸ್ತಿಕೆ ವಹಿಸಿ ಜೆಡಿಎಸ್ ಪಕ್ಷದ ಮಾಜಿ ಸಚಿವರು ಹಾಗೂ ಹಾಲಿ ಶಾಸಕರು ಮತ್ತು ಅವರ ಪುತ್ರನ ಮೇಲೆ ದಾಖಲಾಗಿರುವ ದೌರ್ಜನ್ಯ ಪ್ರಕರಣವನ್ನು ಎಸ್‌ಐಟಿ ಬದಲಿಗೆ ಕೇಂದ್ರದ ಸಿಬಿಐ ಸಂಸ್ಥೆಗಳಿಂದ ತನಿಖೆ ಮಾಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಹಾಗೂ ಮಹಿಳಾ ಘಟಕದ ಅಧ್ಯಕ್ಷೆ ಮಂಜುಳಾ ಮೇಟಿ ನೇತೃತ್ವದಲ್ಲಿ ಗದಗ ಜಿಲ್ಲೆಯ ಜೆಡಿಎಸ್ ಪಕ್ಷದ ಪದಾಧಿಕಾರಿಗಳು, ರಾಜ್ಯ ಪದಾಧಿಕಾರಿಗಳು, ಕಾರ್ಯಕರ್ತರು ನಗರದ ಗಾಂಧಿ ವೃತದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಹಾಗೂ ತಹಸೀಲ್ದಾರರ ಮೂಲಕ ಮನವಿ ಸಲ್ಲಿಸಿದರು.



ಪ್ರತಿಭಟನೆಯಲ್ಲಿ ಪಕ್ಷದ ರಾಜ್ಯ ಮುಖಂಡರಾದ ವಿ.ಆರ್. ಗೋವಿಂದಗೌಡ್ರು, ಈರಣ್ಣ ಬಾಳಿಕಾಯಿ, ಮುಖಂಡರಾದ ಹಾಜಿಅಲಿ ಕೊಪ್ಪಳ, ಪ್ರವೀಣ್ ಬಾಳಿಕಾಯಿ, ಎಂ.ಎಸ್. ಪರ್ವತಗೌಡ್ರ, ಸಂಶಿ ವಕೀಲರು, ಪ್ರಫುಲ್ ಪುಣೇಕರ್, ಸಿರಾಜ್ ಕದಡಿ, ರಾಜೇಸಾಬ್ ತಹಸೀಲ್ದಾರ್, ರಸೂಲ್ ಬಳ್ಳಾರಿ, ತಿಪ್ಪಣ್ಣ ಹುಡೇದ, ಸಂಗಪ್ಪ ಯಲಬುಂಚಿ, ಮಂಜುನಾಥ ದೊಡ್ಡಮನಿ, ವಿನಾಯಕ್ ಪರ್ವತ್, ಲಲಿತ ಕಲ್ಲಪ್ಪನವರ್, ಜಯರಾಜ್ ವಾಲಿಕಾರ್ ಸೇರಿದಂತೆ ಪಕ್ಷದ ಕಾರ್ಯಕರ್ತರು, ಅಪಾರ ಅಭಿಮಾನಿಗಳು ಭಾಗವಹಿಸಿದ್ದರು.

## ಇಂದು SSLC ಫಲಿತಾಂಶ ಪ್ರಕಟ: ವಿದ್ಯಾರ್ಥಿಗಳು ಈ ವೆಬ್ ಸೈಟ್ ನಲ್ಲಿ ಫಲಿತಾಂಶ ವೀಕ್ಷಿಸಿ.

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಸರ್ಕಾರ ಪಠ್ಯಕ್ರಮದ 2024ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ-1ರ ಫಲಿತಾಂಶ ಇಂದು ಮೇ 9ರಂದು ಪ್ರಕಟವಾಗಲಿದೆ.

ವಿದ್ಯಾರ್ಥಿಗಳು https://karresults.nic.in ಜಾಲತಾಣದಲ್ಲಿ ಇಂದು ಬೆಳಗ್ಗೆ 10.30ರ ನಂತರ ಫಲಿತಾಂಶ ವೀಕ್ಷಿಸಬಹುದು ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

ಕರ್ನಾಟಕ ಸರ್ಕಾರದ ಎಸ್ ಎಸ್ ಎಲ್ ಸಿ ಪರೀಕ್ಷೆ 2024 ಮಾರ್ಚ್ 25 ರಿಂದ ಏಪ್ರಿಲ್ 6ರ ನಡುವೆ ನಡೆಯಿತು. ಈ ಬಾರಿ ಎಸ್ ಎಸ್ ಎಲ್‌ಸಿ ಪರೀಕ್ಷೆಗೆ 8.69 ಲಕ್ಷ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದು, ಈ ಪೈಕಿ 4.41 ಲಕ್ಷ ಬಾಲಕರು, 4.28 ಬಾಲಕಿಯರಿದ್ದರು. ಇದಲ್ಲದೆ, 18,225 ಖಾಸಗಿ ವಿದ್ಯಾರ್ಥಿಗಳು, 41,375 ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ 5,424 ವಿಭಿನ್ನ ಸಾಮರ್ಥ್ಯದ ವಿದ್ಯಾರ್ಥಿಗಳು ಕೂಡ ಇವರಲ್ಲೇ ಸೇರಿಕೊಂಡು ಪರೀಕ್ಷೆ ಬರೆದಿದ್ದಾರೆ. ಕರ್ನಾಟಕದ ಒಟ್ಟು 2,750 ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳು ಈ ಸಲದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದಿದ್ದರು.

ಬಸವೇಶ್ವರ ಜಯಂತಿ ಅಂಗವಾಗಿ ಅಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ವತಿಯಿಂದ ಕಾರ್ಯಕ್ರಮ

# 'ಮಾನವತಾವಾದಿ ಬಸವೇಶ್ವರ ಪ್ರಶಸ್ತಿ' ಪ್ರದಾನ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದ್ಗುರು ತೋಂಟದಾರ್ಯ ಮಠದಲ್ಲಿ ವಿಶ್ವಗುರು ಬಸವೇಶ್ವರ ಜಯಂತಿ ಅಂಗವಾಗಿ ಲಕ್ಷ್ಮೇಶ್ವರದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ವತಿಯಿಂದ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.



ತ್ರಿವಿಧ ದಾಸೋಹಿ ಪೂಜ್ಯ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ ಹಾಗೂ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಸಮಾರಂಭ ಜರುಗಲಿದ್ದು, ಮೇ.10ರಂದು ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ತೋಂಟದಾರ್ಯ ಮಠದಿಂದ ಭವ್ಯ ಮೆರವಣಿಗೆ ಆರಂಭವಾಗಿ ನಗರದಾದ್ಯಂತ ಸಂಚರಿಸಲಿದೆ. ಸಾಯಂಕಾಲ 7.30ಕ್ಕೆ ಶ್ರೀಮಠದದಲ್ಲಿ ಜರುಗುವ ವೇದಿಕೆ ಕಾರ್ಯಕ್ರಮದಲ್ಲಿ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ಪ್ರದಾನ ಸಮಾರಂಭ ನೆರವೇರುವುದು.


ಶಿವಮೊಗ್ಗದ ಡಾ.ಪುಟ್ಟರಾಜ ಕವಿ ಗವಾಯಿಗಳ ಉಚಿತ ಸಂಗೀತ ಮತ್ತು ಸಂಸ್ಕೃತ ಪಾಠಶಾಲೆಗೆ ಈ ಬಾರಿ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ. ಪರಮಶಿವಮೂರ್ತಿ ಪ್ರಶಸ್ತಿ ಪ್ರದಾನ ನೆರವೇರಿಸುವರು.

ಇದೇ ಸಂದರ್ಭದಲ್ಲಿ ಡಾ.ಎಂ.ಎಂ ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ ಡಾ.ಶಿವಾನಂದ ವಿರಕ್ತಮಠ ರಚಿಸಿದ 'ಪ್ರೌಢದೇವರಾಯನ ಕಾಲದ ಕನ್ನಡ ಸಾಹಿತ್ಯ' ಗ್ರಂಥ ಲೋಕಾರ್ಪಣೆಗೊಳ್ಳಲಿದೆ. ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತ ಪ್ರತಿ ವಿಭಾಗದ ಮುಖ್ಯಸ್ಥ ಡಾ.ಕೆ ರವೀಂದ್ರನಾಥ ಗ್ರಂಥ ಲೋಕಾರ್ಪಣೆಗೊಳಿಸುವರು. ರೇವಣಸಿದ್ಧಯ್ಯ ಮರಿದೇವರಮಠ ಹಾಗೂ ಸಂಗಡಿಗರಿಂದ ವಚನ ಸಂಗೀತ ಜರುಗುವುದು.

ಮೇ.11ರ ಸಂಜೆ 7.30ಕ್ಕೆ ಜರುಗುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸಚಿವ ಎಸ್.ಎಸ್. ಪಾಟೀಲ ವಹಿಸುವರು. ಅತಿಥಿಗಳಾಗಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮೇಗೌಡ ಆಗಮಿಸುವರು.

ಧಾರವಾಡದ ವಿಜಯಕುಮಾರ ಕಮ್ಮಾರ ವಿಶೇಷ ಉಪನ್ಯಾಸ ನೀಡುವರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ಅವರಿಂದ ವಚನ ಸಂಗೀತ ಹಾಗೂ ರಾಜೇಶ್ವರಿ ಕಲಾ ಕುಟೀರದ ವಿದ್ಯಾರ್ಥಿಗಳಿಂದ ವಚನ ವೈಭವ ಜರುಗುವುದು ಎಂದು ಪ್ರಕಟಣೆ ತಿಳಿಸಿದೆ.

## ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಕ್ರಿಕೆಟ್ ತಂಡದಲ್ಲಿ ಅಲ್ಪಸಂಖ್ಯಾತರಿಗೆ ಆದ್ಯತೆ ನೀಡುತ್ತದೆ: ಮತ್ತೆ ದ್ವೇಷ ಬಿತ್ತಿದ ಮೋದಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಧರ್ಮದ ಆಧಾರದ ಮೇಲೆ ಕ್ರೀಡೆಗಳಲ್ಲಿ ಅಲ್ಪಸಂಖ್ಯಾತರಿಗೆ ಆದ್ಯತೆ ನೀಡಲು ಕಾಂಗ್ರೆಸ್ ಪಕ್ಷ ಬಯಸಿದೆ, ಕ್ರಿಕೆಟ್ ತಂಡದಲ್ಲಿ ಯಾರು ಉಳಿಯುತ್ತಾರೆ ಮತ್ತು ಯಾರು ಉಳಿಯುವುದಿಲ್ಲ ಎಂಬುದನ್ನು ಕಾಂಗ್ರೆಸ್ ಧರ್ಮದ ಆಧಾರದಲ್ಲಿ ನಿರ್ಧರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಮತ್ತೊಮ್ಮೆ ಕಾಂಗ್ರೆಸ್ ವಿರುದ್ಧ ಆರೋಪವನ್ನು ಮಾಡಿದ್ದಾರೆ.


ಮಧ್ಯಪ್ರದೇಶದ ಧಾರ್‌ನಲ್ಲಿ ಲೋಕಸಭೆ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಧರ್ಮದ ಆಧಾರದ ಮೇಲೆ ಕ್ರೀಡೆಗಳಲ್ಲಿ ಅಲ್ಪಸಂಖ್ಯಾತರಿಗೆ ಆದ್ಯತೆ ನೀಡಲು ಕಾಂಗ್ರೆಸ್ ಪಕ್ಷ ಬಯಸಿದೆ, ಕ್ರಿಕೆಟ್ ತಂಡದಲ್ಲಿ ಯಾರು ಉಳಿಯುತ್ತಾರೆ ಮತ್ತು ಯಾರು ಉಳಿಯುವುದಿಲ್ಲ ಎಂಬುದನ್ನು ಕಾಂಗ್ರೆಸ್ ಧರ್ಮದ ಆಧಾರದಲ್ಲಿ ನಿರ್ಧರಿಸುತ್ತದೆ, ನಾನು ಕಾಂಗ್ರೆಸ್‌ನ್ನು ಕೇಳಲು ಬಯಸಿದ್ದೆ, ಹಾಗೆ ಮಾಡಲು ಬಯಸಿದರೆ, ಅದು 1947ರಲ್ಲಿ ದೇಶವನ್ನು ಏಕೆ ಮೂರು ಭಾಗಗಳಾಗಿ ವಿಭಜಿಸಿತು ಎಂದು ನಾನು ಕೇಳಲು ಬಯಸುತ್ತೇನೆ. ನಾನು ಬದುಕಿರುವವರೆಗೂ ನಕಲಿ ಜಾತ್ಯತೀತತೆಯ ಹೆಸರಿನಲ್ಲಿ ಭಾರತದ ಗುರುತನ್ನು ಅಳಿಸಿ ಹಾಕುವ ಯಾವುದೇ ಪ್ರಯತ್ನವನ್ನು ಯಶಸ್ವಿಯಾಗಲು ಬಿಡುವುದಿಲ್ಲ ಎಂದು ಹೇಳಿದ್ದಾರೆ.

ಕಾಶ್ಮೀರದಲ್ಲಿ 370ನೇ ವಿಧಿಯನ್ನು ಕಾಂಗ್ರೆಸ್ ಹಿಂಪಡೆಯದಂತೆ ಮತ್ತು ಅಯೋಧ್ಯೆಯಲ್ಲಿ ರಾಮ ಮಂದಿರಕ್ಕೆ "ಬಾಬರಿ ಬೀಗ" ಹಾಕದಂತೆ ನೋಡಿಕೊಳ್ಳಬೇಕಿದ್ದರೆ ಬಿಜೆಪಿ ನೇತೃತ್ವದ ಎನ್‌ಡಿಎಗೆ 400 ಸ್ಥಾನಗಳ ಜನಾದೇಶವನ್ನು ನೀಡಬೇಕು ಎಂದು ಮೋದಿ ಹೇಳಿದ್ದಾರೆ.

ಇದೇ ವೇಳೆ ಸಂವಿಧಾನ ರಚನೆಯಲ್ಲಿ ಪಂಡಿತ್ ನೆಹರೂಗೆ ಹೋಲಿಸಿದರೆ ಅಂಬೇಡ್ಕರ್ ಪಾತ್ರ ಕಿರಿದು ಎಂದು ಹೇಳುವ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ಅವಮಾನಿಸುತ್ತಿದೆ, ವಾಸ್ತವವೆಂದರೆ, ಕಾಂಗ್ರೆಸ್ ಪರಿವಾರವು ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನವನ್ನು ಆಳವಾಗಿ ದ್ವೇಷಿಸುತ್ತದೆ ಎಂದು ಮೋದಿ ವಾಗ್ದಾಳಿಯನ್ನು ನಡೆಸಿದ್ದಾರೆ.

ರಾಜಸ್ಥಾನದ ಬನ್ಸ್ವಾರದಲ್ಲಿ ಚುನಾವಣಾ ಸಮಾವೇಶದಲ್ಲಿ ಮಾತನಾಡಿದ್ದ ನರೇಂದ್ರ ಮೋದಿ, ಈ ದೇಶದ ಸಂಪತ್ತನ್ನು ಹೆಚ್ಚು ಮಕ್ಕಳನ್ನು ಹೆರುವ ಮುಸ್ಲಿಮ್ ಸಮುದಾಯಕ್ಕೆ ನೀಡುವುದೇ ಕಾಂಗ್ರೆಸ್‌ನ ಗ್ಯಾರಂಟಿ ಎಂದು ಹೇಳಿದ್ದು, ಮುಸ್ಲಿಂ ಅಲ್ಪಸಂಖ್ಯಾತರನ್ನು "ಒಳನುಸುಳುವವರು" ಮತ್ತು "ಹೆಚ್ಚು ಮಕ್ಕಳನ್ನು ಹೊಂದಿರುವವರು" ಎಂದು ಹೇಳಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಸಂಪತ್ತನ್ನು "ಒಳನುಸುಳುಕೋರರು" ಮತ್ತು "ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ" ಹಂಚಬಹುದು ಎಂದು ಹೇಳಿ ವಿವಾದವನ್ನು ಸೃಷ್ಟಿಸಿದ್ದರು.

# ಜೋಡೆತ್ತಿನ ಖಾಲಿ ಗಾಡಾ ಓಡಿಸುವ ಸ್ಪರ್ಧೆ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಜಿ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಮೇ.9ರಂದು ಬೆಳಿಗ್ಗೆ 8 ಗಂಟೆಗೆ ಗದಗದ ಹೊಂಬಳ ರಸ್ತೆಯ ಉಮಚಗಿ (ವಡಗೇರಿ) ಇವರ ಹೊಲದಲ್ಲಿ ಜೋಡೆತ್ತಿನ ಖಾಲಿ ಗಾಡಾ ಓಡಿಸುವ ಸ್ಪರ್ಧೆ ಜರುಗಲಿದೆ.

ಪ್ರಥಮ ಬಹುಮಾನ 10 ಗ್ರಾಂ ಬಂಗಾರ, ದ್ವಿತೀಯ ಬಹುಮಾನ 5 ಗ್ರಾಂ ಬಂಗಾರ, ತೃತೀಯ ಬಹುಮಾನ 2.5 ಗ್ರಾಂ ಬಂಗಾರ, ನಾಲ್ಕನೇ ಬಹುಮಾನ ರೂ.15001 ಹಾಗೂ 5ನೇ ಬಹುಮಾನ ರೂ.10001 ಪ್ರದಾನ ಮಾಡಲಾಗುವುದು. ಬೆಳಿಗ್ಗೆ 8ರಿಂದ 1 ಗಂಟೆಯವರೆಗೆ 2 ಸಾವಿರ ರೂ, ಮಧ್ಯಾಹ್ನ 1ರಿಂದ 3 ಗಂಟೆಯವರೆಗೆ 2500 ರೂಗ, ಮಧ್ಯಾಹ್ನ 3ರಿಂದ 5 ಗಂಟೆಯವರೆಗೆ 3 ಸಾವಿರ ರೂ ಪ್ರವೇಶ ಶುಲ್ಕವಿರುತ್ತದೆ. ಸ್ಪರ್ಧೆಯ ನಿರ್ಣಯಗಳು ಪಂಚರ ಮೂಲಕವೇ ನಿರ್ಧಾರಗೊಳ್ಳುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ-9972485302, 9663570842, 9901350410, 9740272750, 9980367552 ಸಂಪರ್ಕಿಸಬೇಕೆಂದು ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಗಂಜಿ ಬಸವೇಶ್ವರ ನಂದಿ ಧ್ವಜಾರೋಹಣ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರರ 62ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಅಡ್ನೂರ-ರಾಜೂರು ಬ್ರಹನ್ಮಠದ ಶ್ರೀ ಷ.ಬ್ರ. ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳ ಅಮೃತ ಹಸ್ತದಿಂದ ಶ್ರೀನಂದಿ ಧ್ವಜಾರೋಹಣ ನೆರವೇರಿತು.

ಉ ಸ್ ು ಗಿ ನ್ ಗ್ ಟ್ಟಿ ಂ ು್ ು ನಿವಾಸಿಗಳು, ಗುರು-ಹಿರಿಯರು, ಭಕ್ತಾದಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



## ಶಿವಮೊಗ್ಗದಲ್ಲಿ ಹಾಡಹಗಲೇ ಡಬಲ್ ಮರ್ಡರ್; ಇಬ್ಬರು ಯುವಕರ ಹತ್ಯೆ

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಶಿವಮೊಗ್ಗದ ಲಷ್ಕರ್ ಮೊಹಲ್ಲಾದಲ್ಲಿ ಬುಧವಾರ ಹಾಡಹಗಲೇ ಡಬಲ್ ಮರ್ಡರ್ ನಡೆದಿದ್ದು, ಇಬ್ಬರು ಮುಸ್ಲಿಂ ಯುವಕರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ, ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ.

ಹತ್ಯೆಯಾದ ಯುವಕರನ್ನು ಗೌಸ್(30) ಮತ್ತು ಶೋಹೆಬ್(35) ಎಂದು ಗುರುತಿಸಲಾಗಿದೆ. ಹಳೆಯ ವೈಷಮ್ಯ ಹಿನ್ನೆಲೆಯಲ್ಲಿ ಇಬ್ಬರ ಹತ್ಯೆ ನಡೆದಿರುವ ಶಂಕೆ ವ್ಯಕ್ತವಾಗಿದ್ದು, ಸ್ಥಳಕ್ಕೆ ಕೋಟೆ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.


ಕೊಲೆಯಾದ ಈ ಇಬ್ಬರು ರೌಡಿ ಶೀಟರ್ ಗಳಾಗಿದ್ದು, ಮತ್ತೋರ್ವ ರೌಡಿಶೀಟರ್ ಆದ ಯಾಸೀನ್ ಖುರೇಷಿ ಮೇಲೆ ಹಲ್ಲೆ ಮಾಡಲು ಬಂದಿದ್ದರು. ಈ ವೇಳೆ ಯಾಸೀನ್ ಖುರೇಷಿ ಕಡೆಯವರು ಸೇರಿ ಇಬ್ಬರನ್ನು ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿದ್ದಾರೆ.

ಘಟನೆಯಲ್ಲಿ ರೌಡಿಶೀಟರ್ ಯಾಸೀನ್ ಖುರೇಷಿಗೆ ಗಾಯವಾಗಿದ್ದು, ಚಿಕಿತ್ಸೆಗೆ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೆಎಸ್‌ಆರ್ ತುಕಡಿ ನಿಯೋಜನೆ ಮಾಡಲಾಗಿದೆ. ಈ ಕುರಿತು ತನಿಖೆ ನಡೆಸಲಾಗುತ್ತಿದೆ ಎಂದು ಎಸ್‌ಪಿ ತಿಳಿಸಿದ್ದಾರೆ. ಈ ಸಂಬಂಧ ಕೋಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದ್ವೇಷಪೂರಿತ ಭಾಷಣ: ಮೋದಿಯಿಂದ ವಿವರಣೆ ಕೇಳಲು ಚು. ಆಯೋಗಕ್ಕೆ ನಿರ್ದೇಶಿಸುವಂತೆ ಕೋರಿ ಕಾಂಗ್ರೆಸ್ ಹೈಕೋರ್ಟ್ ಮೊರೆ

■ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ಪ್ರಚಾರದ ಸಮಯದಲ್ಲಿ ದ್ವೇಷಪೂರಿತ ಭಾಷಣಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರಿಂದ ವಿವರಣೆಯನ್ನು ಕೇಳಲು ಚುನಾವಣಾ ಆಯೋಗಕ್ಕೆ ನಿರ್ದೇಶಿಸುವಂತೆ ಕೋರಿ ತಮಿಳುನಾಡು ಕಾಂಗ್ರೆಸ್ ಸಮಿತಿ ಮದ್ರಾಸ್ ಹೈಕೋರ್ಟ್ ಮೊರೆ ಹೋಗಿದೆ.



ಪ್ರಧಾನಿ ನರೇಂದ್ರ ಮೋದಿ ಅವರ ದ್ವೇಷದ ಭಾಷಣಗಳ ಬಗ್ಗೆ ವಿವರಣೆಯನ್ನು ಕೇಳಲು ಮತ್ತು ಸುಳ್ಳು, ಅವಹೇಳನಕಾರಿ ಹೇಳಿಕೆಗಳಿಗೆ ಕಡಿವಾಣ ಹಾಕಲು ಮತ್ತು ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆ ವಿರುದ್ಧ ಮತ್ತಷ್ಟು ಸುಳ್ಳು ಹೇಳಿಕೆಗಳನ್ನು ನೀಡುವುದನ್ನು ತಡೆಯಲು ಕ್ರಮಗಳನ್ನು ತೆಗೆದುಕೊಳ್ಳುವಂತೆ ಭಾರತದ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆ ತಮಿಳುನಾಡು ಕಾಂಗ್ರೆಸ್ ಸಮಿತಿ ಮದ್ರಾಸ್ ಹೈಕೋರ್ಟ್‌ಗೆ ಮನವಿ ಮಾಡಿದೆ.

ಮುಂಬರುವ 2024ರ ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭೀತಿಯಿಂದ ಬಿಜೆಪಿಯು ಹಿಂದೂ ರಾಷ್ಟ್ರೀಯತೆಯ ಒಡೆದು ಆಳುವ ಪ್ರಚಾರದಲ್ಲಿ ತೊಡಗಿದೆ ಎಂದು ಕೆ.ಸೆಲ್ವಪೆರುಂತಗೈ ನೇತೃತ್ವದ ಸಮಿತಿಯು ಮನವಿಯಲ್ಲಿ ಹೇಳಿಕೊಂಡಿದೆ.

ಪ್ರಧಾನಿಯವರ ಭಾಷಣವು ಕಟ್ಟುಕಥೆಗಳಿಂದ ತುಂಬಿತ್ತು ಮತ್ತು ಕಾಂಗ್ರೆಸ್ ಪಕ್ಷದ ಪ್ರಣಾಳಿಕೆ ಬಗ್ಗೆ ಸುಳ್ಳು ಹೇಳುವ ನಿಂದನಾತ್ಮಕ ಭಾಷೆಯನ್ನು ಬಳಸಿದ್ದರು. ಅಲ್ಪಸಂಖ್ಯಾತರನ್ನು ಗುರಿಯಾಗಿಸುವ ಭಾಷಣವು ಅಗೌರವ ಮಾತ್ರವಲ್ಲ, ನಾಚಿಕೆಗೇಡಿನದ್ದಾಗಿದೆ, ಅವರು ಕೋಮು ಉದ್ವಿಗ್ನತೆಯನ್ನು ಉತ್ತೇಜಿಸುತ್ತಾರೆ ಮತ್ತು ಜನರ ನಡುವೆ ವಿಭಜನೆಯನ್ನು ಬಿತ್ತುತ್ತಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ದೇಶದ ಎಲ್ಲ ನಾಗರಿಕರ ಘನತೆಯನ್ನು ಎತ್ತಿ ಹಿಡಿಯಬೇಕಿದ್ದ ಪ್ರಧಾನಿ ಇಂತಹ ಹೇಳಿಕೆಗಳನ್ನು ನೀಡುವ ಮೂಲಕ ತಾವು ಮಾಡಿದ ಪ್ರಮಾಣ ವಚನವನ್ನು ಉಲ್ಲಂಘಿಸುತ್ತಿದ್ದಾರೆ. ಅಂತಹ ಹೇಳಿಕೆಗಳು ಅಪಾಯಕಾರಿ ಪೂರ್ವನಿದರ್ಶನಕ್ಕೆ ಕಾರಣವಾಗುತ್ತದೆ. ಹಲವಾರು ದೂರುಗಳ ಹೊರತಾಗಿಯೂ, ಚುನಾವಣಾ ಆಯೋಗವು ಶೋಕಾಸ್ ನೋಟಿಸ್‌ನ್ನು ಮಾತ್ರ ಕಳುಹಿಸಿದೆ ಮತ್ತು ಚುನಾವಣಾ ಆಯೋಗವು ತೋರಿದ ಇಂತಹ ಮೃದುತ್ವವು ನಾಗರಿಕರಿಗೆ ತಪ್ಪು ಸಂದೇಶವನ್ನು ರವಾನಿಸುತ್ತದೆ ಮತ್ತು ಇಡೀ ಚುನಾವಣಾ ಪ್ರಕ್ರಿಯೆಯನ್ನು ದುರ್ಬಲಗೊಳಿಸುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ರಾಜಸ್ಥಾನದ ಬನ್ಸ್ವಾರದಲ್ಲಿ ಚುನಾವಣಾ ಸಮಾವೇಶದಲ್ಲಿ ಮಾತನಾಡಿದ ನರೇಂದ್ರ ಮೋದಿ, ಈ ದೇಶದ ಸಂಪತ್ತನ್ನು ಹೆಚ್ಚು ಮಕ್ಕಳನ್ನು ಹೆರುವ ಮುಸ್ಲಿಮ್ ಸಮುದಾಯಕ್ಕೆ ನೀಡುವುದೇ ಕಾಂಗ್ರೆಸ್‌ನ ಗ್ಯಾರಂಟಿ ಎಂದು ಹೇಳಿದ್ದು, ಮುಸ್ಲಿಂ ಅಲ್ಪಸಂಖ್ಯಾತರನ್ನು "ಒಳನುಸುಳುವವರು" ಮತ್ತು "ಹೆಚ್ಚು ಮಕ್ಕಳನ್ನು ಹೊಂದಿರುವವರು" ಎಂದು ಹೇಳಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಸಂಪತ್ತನ್ನು "ಒಳನುಸುಳುಕೋರರು" ಮತ್ತು "ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ" ಹಂಚಬಹುದು ಎಂದು ಹೇಳಿ ವಿವಾದವನ್ನು ಸೃಷ್ಟಿಸಿದ್ದರು.

ದೇಶದ ವೈಯಕ್ತಿಕ ಆಸ್ತಿಗಳನ್ನು ಕಸಿದು, ಅದನ್ನು ಮುಸ್ಲಿಮರಿಗೆ ಕಾಂಗ್ರೆಸ್ ಹಂಚಲಿದೆ. ಇದು ನಗರ ನಕ್ಸಲರ ಯೋಜನೆಯಾಗಿದೆ. ಈ 'ನಗರ ನಕ್ಸಲ್' ಮನಸ್ಥಿತಿಯಿಂದ ತಾಯಂದಿರೇ ಮತ್ತು ಸಹೋದರಿಯರೇ, ಅವರು ನಿಮ್ಮ 'ಮಂಗಲಸೂತ್ರ'ವನ್ನು ಸಹ ಬಿಡುವುದಿಲ್ಲ. ಅವರು ಆ ಮಟ್ಟಕ್ಕೆ ಹೋಗಬಹುದು. ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಅವರು ತಾಯಿ ಮತ್ತು ಸಹೋದರಿಯರ ಚಿನ್ನವನ್ನು ಲೆಕ್ಕ ಹಾಕುತ್ತಾರೆ, ಅದರ ಬಗ್ಗೆ ಮಾಹಿತಿ ಪಡೆದು ನಂತರ ಆ ಆಸ್ತಿಯನ್ನು ಹಂಚುತ್ತಾರೆ. ಅವರು ಅದನ್ನು ಯಾರಿಗೆ ಹಂಚುತ್ತಾರೆ? ಮನಮೋಹನ್ ಸಿಂಗ್ ಅವರ ಸರ್ಕಾರವು ದೇಶದ ಆಸ್ತಿಯಲ್ಲಿ ಮುಸ್ಲಿಮರಿಗೆ ಮೊದಲ ಹಕ್ಕು ಎಂದು ಹೇಳಿತ್ತು. ಇದನ್ನು ನುಸುಳುಕೋರರಿಗೆ ವಿತರಿಸಲಾಗುವುದು. ನೀವು ಕಷ್ಟಪಟ್ಟು ಸಂಪಾದಿಸಿದ ಹಣ ನುಸುಳುಕೋರರಿಗೆ ಹೋಗಬೇಕೇ? ಎಂದು ಪ್ರಧಾನಿ ಮೋದಿ ಪ್ರಶ್ನಿಸಿದ್ದರು.

## ಪ್ರಜ್ವಲ್ ರೀತಿ ಸಿದ್ದು, ಪರಮೇಶ್ವರ್ ವಿಡಿಯೋ ಹೊರಬರಬಹುದು; ಈಗಲೇ ಆ 'ಮಹಾನಾಯಕ'ನನ್ನು ತಡೆಯಿರಿ': ಜಾರಕಿಹೊಳಿ

■ವಿಜಯಸಾಕ್ಷಿ ಸುದ್ದಿ, ಗೋಕಾಕ್

ಪ್ರಜ್ವಲ್ ರೇವಣ್ಣ ಅವರಂತೆಯೇ ಇಂದಲ್ಲ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಸಚಿವ ಪರಮೇಶ್ವರ ಅವರ ವಿಡಿಯೊಗಳೂ ಹೊರಬರಬಹುದು. ನಾನು ಅವರಿಗೆ ಸೂಚನೆ ಕೊಡುತ್ತಿದ್ದೇನೆ ಈಗಲೇ ಆ 'ಮಹಾನಾಯಕ'ನನ್ನು ತಡೆಯಿರಿ' ಎಂದು ಗೋಕಾಕ ಶಾಸಕ ರಮೇಶ ಜಾರಕಿಹೊಳಿ ಹೇಳಿದ್ದಾರೆ.

ಮತದಾನ ಮಾಡಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನನ್ನ ಖಾಸಗಿ ವಿಡಿಯೊಗಳು ಹೊರಗೆ ಬಂದಾಗಲೇ ನಾನು ಎಚ್ಚರಿಕೆ ಕೊಟ್ಟಿದ್ದೆ. ಮಹಾನಾಯಕನೊಬ್ಬ ಪ್ರತಿಷ್ಠಿತ ಕುಟುಂಬಕ್ಕೆ ಖೆಡ್ಡಾ ತೋಡುತ್ತಿದ್ದಾನೆ ಎಂದಾಗ ನನ್ನ ಮಾತು ನಂಬಿರಲಿಲ್ಲ. ಈಗ ಏನಾಗಿದೆ ಎಂದು ಪ್ರಶ್ನಿಸಿದರು.

ರಾಜಕಾರಣದಲ್ಲಿ ಈಗ ಸೆದ್ಧಾಂತಿಕ ಹೋರಾಟ ಮುಗಿದು ಹೋಗಿದೆ. ಒಬ್ಬರನ್ನು ಕಂಡರೆ ಮತ್ತೊಬ್ಬರು ತುಳಿಯುವವರೇ ಜಾಸ್ತಿಯಾಗಿದೆ. ಸಿ.ಡಿ, ಪೆನ್‌ಡ್ರೈವ್ ಪ್ರಕರಣಗಳು ಯಾವುದು ಒಳ್ಳೆಯದಲ್ಲ. ಇದನ್ನು ಪಕ್ಷಾತೀತವಾಗಿ ಇಲ್ಲಿಗೆ ಮುಗಿಸಬೇಕು. ಇಲ್ಲದಿದ್ದರೆ ಮುಂದೊಂದು ದಿನ ಸಿದ್ದರಾಮಯ್ಯ ಮತ್ತು ಡಾ.ಜಿ.ಪರಮೇಶ್ವರ್ ಅವರ ಸಿ.ಡಿಗಳು ಆಚೆ ಬಂದರೂ ಅಚ್ಚರಿಪಡುವಂಥದ್ದು ಏನೂ ಇಲ್ಲ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka